ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 109 Thursday **15-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 109 ಗುರುವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಭಕ್ತರ ಮನೆಬಾಗಿಲಿಗೆ ಶ್ರೀಗಳ ನಡೆ; ಬರದ ನಾಡಿನಲ್ಲಿ ಆತ್ಮಸ್ಥೈರ್ಯದ ಬೆಳಕು!

9 ದಿನಗಳಲ್ಲಿ 11 ಗ್ರಾಮಗಳ ಪ್ರತಿ ಮನೆಗೂ ಭೇಟಿ, ರೈತರು ಮತ್ತು ಕುಟುಂಬಗಳಿಗೆ ಧೈರ್ಯ ತುಂಬುವ ಅಪರೂಪದ ಧಾರ್ಮಿಕ ಸೇವೆ

“ಮುಂಜಾನೆಯ ಮೆರಗು”

ಜಗಳೂರು, ಅ.14– ಒಂದೆಡೆ ಮಳೆ ಇಲ್ಲದೆ ಬೆಳೆಗಳು ಒಣಗುತ್ತಿವೆ. ಮತ್ತೊಂದೆಡೆ ಕೃಷಿಯನ್ನೇ ನಂಬಿ ಬದುಕುತ್ತಿರುವ ರೈತಾಪಿ ಕುಟುಂಬಗಳಲ್ಲಿ ಆತಂಕ ಮನೆಮಾಡಿದೆ. ಕೈಗೆ ಬಂದ ತುತ್ತು ಬಾಯಿಗೆ ಬಾರದ ಪರಿಸ್ಥಿತಿಯಲ್ಲಿ ಅನ್ನದಾತರು ಆರ್ಥಿಕ ಸಂಕಷ್ಟದ ಜತೆಗೆ ಮಾನಸಿಕ ಒತ್ತಡವನ್ನೂ ಎದುರಿಸುತ್ತಿದ್ದಾರೆ. ಇಂತಹ ಕಷ್ಟದ ಸಂದರ್ಭದಲ್ಲಿ ಜನರ ಬಳಿಗೆ ಧಾವಿಸಿ, ಅವರ ನೋವುಗಳನ್ನು ಆಲಿಸಿ, ಮನೋಬಲ ತುಂಬುವ ಕಾರ್ಯಕ್ಕೆ ಕಣ್ವ ಕುಪ್ಪೆ ಗವಿಮಠದ ಶ್ರೀಗಳು ಮುಂದಾಗಿರುವುದು ಗಮನ ಸೆಳೆಯುತ್ತಿದೆ.

ಬರಗಾಲದ ಸಂಕಷ್ಟದ ನಡುವೆ ಶರನ್ನವರಾತ್ರಿ ಸಂದರ್ಭದಲ್ಲಿ ಧಾರ್ಮಿಕ ಆಚರಣೆಯನ್ನು ಜನಸೇವೆಯೊಂದಿಗೆ ಬೆಸೆದಿರುವ ಕಣ್ವ ಕುಪ್ಪೆ ಗವಿಮಠ ಹಾಗೂ ಸೇರಿದಾರ ಪೀಠದ ಉತ್ತರಾಧಿಕಾರಿಗಳಾಗಿ ನೇಮಕಗೊಂಡಿರುವ ಶ್ರೀ ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಭಕ್ತರೇ ಮಠಕ್ಕೆ ಬರುವುದನ್ನು ಕಾಯದೆ ಸ್ವತಃ ಭಕ್ತರ ಮನೆಬಾಗಿಲಿಗೆ ತೆರಳಿ ಆಶೀರ್ವದಿಸುವ ವಿಶಿಷ್ಟ ಕಾರ್ಯಕ್ಕೆ ಕೈಹಾಕಿದ್ದಾರೆ.

ಮಠದ ಸುತ್ತಮುತ್ತಲಿನ 11 ಗ್ರಾಮಗಳ ಪ್ರತಿಯೊಂದು ಮನೆಗೂ ಭೇಟಿ ನೀಡಿ, ರೈತರು ಸೇರಿದಂತೆ ಸಂಕಷ್ಟದಲ್ಲಿರುವ ಕುಟುಂಬಗಳಿಗೆ ಆತ್ಮಸ್ಥೈರ್ಯ ತುಂಬುವುದು ಈ ಸೇವೆಯ ಮುಖ್ಯ ಉದ್ದೇಶವಾಗಿದೆ. ಜಾತಿ, ಮತ, ಪಂಥದ ಭೇದವಿಲ್ಲದೆ ಎಲ್ಲ ಸಮುದಾಯಗಳ ಮನೆಗಳಿಗೂ ತೆರಳಿ, ಅಕ್ಷತೆ ಹಾಕಿ ಆಶೀರ್ವದಿಸುವ ಮೂಲಕ ಧಾರ್ಮಿಕ ಸೇವೆಗೆ ಮಾನವೀಯತೆಯ ಸ್ಪರ್ಶ ನೀಡಿದ್ದಾರೆ.

ಭಕ್ತರ ಮನೆಬಾಗಿಲಿಗೆ ಬಂದ ಗುರುಗಳು

ಸಾಮಾನ್ಯವಾಗಿ ಭಕ್ತರು ತಮ್ಮ ಸಂಕಷ್ಟಗಳನ್ನು ನಿವಾರಿಸಿಕೊಳ್ಳಲು, ಆಶೀರ್ವಾದ ಪಡೆಯಲು ಮಠಗಳಿಗೆ



ತೆರಳುತ್ತಾರೆ. ಆದರೆ ಇಲ್ಲಿ ಶ್ರೀಗಳೇ ಭಕ್ತರ ಮನೆಗಳಿಗೆ ತೆರಳುತ್ತಿದ್ದಾರೆ. ಪ್ರತಿಯೊಬ್ಬ ಭಕ್ತರಿಗೂ ಮಠಕ್ಕೆ ಬಂದು ಶ್ರೀಗಳ ಆಶೀರ್ವಾದ ಪಡೆಯುವ ಆಸೆ ಇರುತ್ತದೆ. ಆದರೆ ವಯಸ್ಸು, ಅನಾರೋಗ್ಯ, ಆರ್ಥಿಕ ಪರಿಸ್ಥಿತಿ ಹಾಗೂ ಕೃಷಿ ಕೆಲಸಗಳ ಕಾರಣದಿಂದ ಎಲ್ಲರಿಗೂ ಮಠಕ್ಕೆ ಭೇಟಿ ನೀಡಲು ಸಾಧ್ಯವಾಗುವುದಿಲ್ಲ. ಇದನ್ನು ಮನಗಂಡ ಶ್ರೀಗಳು, ಭಕ್ತರ ಬಳಿಗೇ ತೆರಳಿ ಆಶೀರ್ವದಿಸುವ ನಿರ್ಧಾರ ಕೈಗೊಂಡಿದ್ದಾರೆ.

ಸುಡುಬಿಸಿಲಿನಲ್ಲೂ ಸೇವೆಯ ಸಂಕಲ್ಪ

ಶ್ರೀಗಳ ಈ ಸೇವಾ ಕಾರ್ಯ ಕೇವಲ ಔಪಚಾರಿಕ ಭೇಟಿ ಅಥವಾ ಧಾರ್ಮಿಕ ಆಚರಣೆಗೆ ಸೀಮಿತವಾಗಿಲ್ಲ. ಬೆಳಿಗಿನ ಜಾವದಿಂದ ರಾತ್ರಿ ತನಕ ಸಾಗುವ ಶ್ರಮದಾಯಕ ಕಾರ್ಯಕ್ರಮ ಇದಾಗಿದೆ.

ಪ್ರತಿದಿನ ಮುಂಜಾನೆ 3.30ಕ್ಕೆ ಎದ್ದು ಮಠದಲ್ಲಿ ಪೂಜಾ ಕಾರ್ಯಗಳನ್ನು ನೆರವೇರಿಸುವ ಶ್ರೀಗಳು, ಬೆಳಿಗ್ಗೆ 8 ಗಂಟೆ ಸುಮಾರಿಗೆ ಗ್ರಾಮಗಳತ್ತ ಪ್ರಯಾಣ ಬೆಳೆಸುತ್ತಾರೆ. ಸುಡುಬಿಸಿಲಿನ ನಡುವೆಯೂ ಮನೆಮನೆಗೆ ತೆರಳಿ ಭಕ್ತರಿಗೆ ಆಶೀರ್ವಾದ ನೀಡುತ್ತಾರೆ. ದಿನವಿಡೀ ಗ್ರಾಮಗಳಲ್ಲಿ ಸಂಚರಿಸಿ, ರಾತ್ರಿ ಸುಮಾರು 8 ಗಂಟೆಗೆ ಮಠಕ್ಕೆ ಮರಳಿದ ಬಳಿಕ ವಿಶೇಷ ಪೂಜಾ ಕಾರ್ಯಗಳನ್ನು ನೆರವೇರಿಸಿ ಪ್ರಸಾದ ಸ್ವೀಕರಿಸುತ್ತಾರೆ.

11 ಗ್ರಾಮಗಳಲ್ಲಿ ಮನೆಮನೆಗೆ ಭೇಟಿ

ಈಗಾಗಲೇ ಭಾನುವಾರ ಐನಳ್ಳಿ ಮತ್ತು ಕೊಡದಗುಡ್ಡ ಗ್ರಾಮಗಳಲ್ಲಿ ಮನೆಮನೆಗೆ ಭೇಟಿ ನೀಡುವ ಮೂಲಕ ಅಭಿಯಾನ ಆರಂಭವಾಗಿದೆ. ಸೋಮವಾರ ಬಸವಪುರ ಮತ್ತು ಚನ್ನಾಪುರ ತಾಂಡದಲ್ಲಿ, ಮಂಗಳವಾರ ಸುರೇಡ್ಡಿಹಳ್ಳಿ ಹಾಗೂ ಗುಡ್ಡದ ಲಿಂಗಣ್ಣನಹಳ್ಳಿ ಗ್ರಾಮಗಳಲ್ಲಿ ಭಕ್ತರ ಮನೆಗಳಿಗೆ ತೆರಳಿ ಆಶೀರ್ವಾದ ನೀಡಿದ್ದಾರೆ.

ಬುಧವಾರ ದೇವಿಕೆರೆ ಗ್ರಾಮದಲ್ಲಿ ಮನೆಮನೆಗೆ ಭೇಟಿ ನೀಡಿ, ಭಕ್ತರೊಂದಿಗೆ ಸಂವಾದ ನಡೆಸಿ ಅವರ ಸಂಕಷ್ಟಗಳನ್ನು ಆಲಿಸಿದ್ದಾರೆ. ಮುಂದಿನ ದಿನಗಳಲ್ಲಿಯೂ ನಿಗದಿತ ಗ್ರಾಮಗಳಲ್ಲಿ ಮನೆಮನೆಗೆ ಭೇಟಿ ನೀಡುವ ಮೂಲಕ ಒಂಬತ್ತು ದಿನಗಳಲ್ಲಿ ಒಟ್ಟು 11 ಗ್ರಾಮಗಳ ಜನರನ್ನು ತಲುಪುವ ಗುರಿ ಹೊಂದಿದ್ದಾರೆ.

ಬರದ ಬೇಗೆಯಲ್ಲಿ ನೊಂದ ರೈತರಿಗೆ ಸಾಂತ್ವನ



ಜಗಳೂರು ತಾಲೂಕು ಮಳೆಯನ್ನೇ ಅವಲಂಬಿಸಿರುವ ಕೃಷಿ ಪ್ರದೇಶವಾಗಿದೆ. ಮುಂಗಾರು ಮಳೆ ಕೈಕೊಟ್ಟಾಗ ಅದರ ಪರಿಣಾಮ ರೈತರ ಬದುಕಿನ ಮೇಲೆ ನೇರವಾಗಿ ಬೀರುತ್ತದೆ. ಬಿತ್ತನೆಗಾಗಿ ಮಾಡಿದ ಖರ್ಚು, ಬೆಳೆ ಬೆಳೆಯುವ ನಿರೀಕ್ಷೆ, ಕುಟುಂಬದ ನಿರ್ವಹಣೆ ಮತ್ತು ಮುಂದಿನ ಬದುಕಿನ ಚಿಂತೆಗಳು ರೈತರನ್ನು ಕಾಡುತ್ತವೆ.

ಇಂತಹ ಸಂದರ್ಭದಲ್ಲಿ ರೈತರಿಗೆ ಆರ್ಥಿಕ ನೆರವು ಎಷ್ಟು ಅಗತ್ಯವೋ, ಮಾನಸಿಕ ಸ್ಥೈರ್ಯವೂ ಅಷ್ಟೇ ಮುಖ್ಯವಾಗಿದೆ. ಬೆಳೆ ನಷ್ಟದಿಂದ ಕಂಗೆಟ್ಟಿರುವ ರೈತರ ಮನೆಗಳಿಗೆ ತೆರಳಿ ಮಾತನಾಡುವುದು, ಅವರ ನೋವುಗಳಿಗೆ ಕಿವಿಯಾಗುವುದು ಮತ್ತು ಧೈರ್ಯ ತುಂಬುವುದು ಮಹತ್ವದ ಸಾಮಾಜಿಕ ಕಾರ್ಯವಾಗಿದೆ.

ಶ್ರೀಗಳು ಮನೆಗಳಿಗೆ ಭೇಟಿ ನೀಡುವ ಮೂಲಕ, ಸಂಕಷ್ಟದ ಸಮಯದಲ್ಲಿ ಯಾರೂ ಒಂಟಿಯಲ್ಲ ಎಂಬ ಭಾವನೆಯನ್ನು ಜನರಲ್ಲಿ ಮೂಡಿಸಲು ಪ್ರಯತ್ನಿಸುತ್ತಿದ್ದಾರೆ. ಅಕ್ಷತೆ ಹಾಕಿ ಆಶೀರ್ವದಿಸುವ ಧಾರ್ಮಿಕ



ಸಂಪ್ರದಾಯದೊಂದಿಗೆ ಜನರ ಬದುಕಿನ ವಾಸ್ತವ ಸಮಸ್ಯೆಗಳನ್ನು ಅರಿಯುವ ಪ್ರಯತ್ನವೂ ಈ ಅಭಿಯಾನದ ಭಾಗವಾಗಿದೆ.

ಮದ್ಯವ್ಯಸನದ ವಿರುದ್ಧವೂ ಜಾಗೃತಿ

ಗ್ರಾಮೀಣ ಭಾಗದ ಕುಟುಂಬಗಳು ಎದುರಿಸುತ್ತಿರುವ ಮತ್ತೊಂದು ಗಂಭೀರ ಸಮಸ್ಯೆಯೆಂದರೆ ಮದ್ಯವ್ಯಸನ. ದುಡಿದು ಸಂಪಾದಿಸಿದ ಹಣವನ್ನು ಮದ್ಯಪಾನಕ್ಕೆ ವ್ಯಯಿಸುವುದರಿಂದ ಅನೇಕ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿವೆ. ಕೆಲವರು ತಮ್ಮ ದುಡಿಮೆಯ ಹಣದ ಜತೆಗೆ ತಂದೆ–ತಾಯಿಯ ಸಂಪಾದನೆಯನ್ನೂ ಮದ್ಯಪಾನಕ್ಕೆ ಖರ್ಚು ಮಾಡುತ್ತಿರುವುದು ಕುಟುಂಬಗಳ ನೆಮ್ಮದಿಗೆ ಧಕ್ಕೆ ತರುತ್ತಿದೆ.

ಮದ್ಯವ್ಯಸನದಿಂದ ಕುಟುಂಬದ ಆರ್ಥಿಕ ಸ್ಥಿತಿ ಹದಗೆಡುವುದಷ್ಟೇ ಅಲ್ಲದೆ, ಕುಟುಂಬ ಸದಸ್ಯರ ನಡುವಿನ ಸಂಬಂಧಗಳ ಮೇಲೂ ಪರಿಣಾಮ ಬೀರುತ್ತದೆ. ಮಕ್ಕಳ ಶಿಕ್ಷಣ, ಮನೆಯ ನಿರ್ವಹಣೆ ಹಾಗೂ ಭವಿಷ್ಯದ ಉಳಿತಾಯಕ್ಕೂ ಅಡ್ಡಿಯಾಗುತ್ತದೆ.

ಈ ಹಿನ್ನೆಲೆಯಲ್ಲಿ ಯುವಜನರು ಮದ್ಯಪಾನದಿಂದ ದೂರ ಉಳಿದು, ದುಡಿಮೆ, ಶಿಕ್ಷಣ ಮತ್ತು ಕುಟುಂಬದ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂಬ ಸಂದೇಶವನ್ನು ಶ್ರೀಗಳು ಸಾರುತ್ತಿದ್ದಾರೆ. ಯುವಕರು ಉತ್ತಮ ಹಾದಿಯಲ್ಲಿ ಸಾಗಿದರೆ ಕುಟುಂಬಗಳು ನೆಮ್ಮದಿಯಿಂದ ಬದುಕಲು ಸಾಧ್ಯವಾಗುತ್ತದೆ. ಕುಟುಂಬದ ಏಳಿಗೆಯೇ ಸಮಾಜದ ಅಭಿವೃದ್ಧಿಗೆ ಭದ್ರ ಬುನಾದಿಯಾಗುತ್ತದೆ ಎಂಬ ಆಶಯವನ್ನು ವ್ಯಕ್ತಪಡಿಸುತ್ತಿದ್ದಾರೆ.

ಧರ್ಮದ ಜತೆಗೆ ಮಾನವೀಯತೆಯ ಸಂದೇಶ

ಧಾರ್ಮಿಕ ಆಚರಣೆಗಳು ಕೇವಲ ಪೂಜೆ, ಪುನಸ್ಕಾರಗಳಿಗೆ ಸೀಮಿತವಾಗದೆ ಜನರ ಬದುಕಿಗೆ ನೆಮ್ಮದಿ ನೀಡುವಂತಿರಬೇಕು. ಸಂಕಷ್ಟದಲ್ಲಿರುವವರ ಕಣ್ಣೀರು ಒರೆಸುವುದು, ಅವರ ನೋವುಗಳಿಗೆ ಸ್ಪಂದಿಸುವುದು ಮತ್ತು ಸಮಾಜದಲ್ಲಿ ಸೌಹಾರ್ದವನ್ನು ಬೆಳೆಸುವುದು ಧಾರ್ಮಿಕ ಸೇವೆಯ ಪ್ರಮುಖ ಉದ್ದೇಶಗಳಾಗಿವೆ.

ಚೌಡೇಶ್ವರಿ ದೇವಿಯ ದಸರಾ ಅಂಬು ಉತ್ಸವದಲ್ಲಿ ಮಾಜಿ ಶಾಸಕ ಎಚ್.ಪಿ. ರಾಜೇಶ್ ಭಾಗಿ



“ಮುಂಜಾನೆಯ ಮೆರಗು”

ಜಗಳೂರು, ಅ.14– ತಾಲೂಕಿನ ಗುರುಸಿದ್ದಾಪುರ ಯಾನೆ ಮಾಡ್ರಹಳ್ಳಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಶ್ರೀ ಚೌಡೇಶ್ವರಿ ದೇವಿಯ ದಸರಾ ಅಂಗವಾಗಿ ಅಂಬು ಉತ್ಸವವನ್ನು ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಉತ್ಸವದಲ್ಲಿ ಮಾಜಿ ಶಾಸಕ ಎಚ್.ಪಿ. ರಾಜೇಶ್ ಅವರು ಭಾಗವಹಿಸಿ, ಶ್ರೀ ಚೌಡೇಶ್ವರಿ ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ದೇವಿಯ ಆಶೀರ್ವಾದದಿಂದ ನಾಡಿನ ಸಮಸ್ತ ಜನತೆಗೆ ಸುಖ, ಶಾಂತಿ, ನೆಮ್ಮದಿ ಹಾಗೂ ಸಮೃದ್ಧಿ ದೊರೆಯಲಿ ಎಂದು ಪ್ರಾರ್ಥಿಸಿದರು.

ಗ್ರಾಮದಲ್ಲಿ ನಡೆದ ಧಾರ್ಮಿಕ ಉತ್ಸವದಲ್ಲಿ ಭಕ್ತರು ಪಾಲ್ಗೊಂಡು ದೇವಿಯ ದರ್ಶನ ಪಡೆದು ಭಕ್ತಿಭಾವ ಮೆರೆದರು. ಈ ಸಂದರ್ಭದಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಮಡ್ರಳ್ಳಿ ಚೌಡೇಶ್ವರಿ ದೇವಿ ಅಂಬು ಉತ್ಸವದಲ್ಲಿ ಕೀರ್ತಿಕುಮಾರ್ ಭಾಗಿ

ಸಾವಿರಾರು ಭಕ್ತರ ಸಮ್ಮುಖದಲ್ಲಿ ಭಕ್ತಿ, ಸಂಭ್ರಮದ ಆಚರಣೆ

“ಮುಂಜಾನೆಯ ಮೆರಗು”

ಜಗಳೂರು, ಅ.14– ತಾಲ್ಲೂಕಿನ ಮಡ್ರಳ್ಳಿ ಗ್ರಾಮದಲ್ಲಿ ವಿಜಯದಶಮಿ ಅಂಗವಾಗಿ ಶ್ರೀ ಚೌಡೇಶ್ವರಿ ದೇವಿಯ ಅಂಬು ಉತ್ಸವವು ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮದಿಂದ ಜರುಗಿತು. ಉತ್ಸವದಲ್ಲಿ ಕೆಪಿಸಿಸಿ ಪರಿಶಿಷ್ಟ ಪಂಗಡ (ಎಸ್‌ಟಿ) ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಭಾಗವಹಿಸಿ, ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಉತ್ಸವದಲ್ಲಿ ಸುಮಾರು 5 ಸಾವಿರಕ್ಕೂ ಅಧಿಕ ಭಕ್ತರು ಪಾಲ್ಗೊಂಡು ದೇವಿಯ ಆರಾಧನೆ ಮಾಡಿದರು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ಭಕ್ತರು ಭಕ್ತಿ ಭಾವದಿಂದ ಉತ್ಸವದಲ್ಲಿ ಪಾಲ್ಗೊಂಡರು. ಗ್ರಾಮಸ್ಥರು ಉರುಮೆ ವಾದ್ಯದ ನಾದದೊಂದಿಗೆ ಕೀರ್ತಿಕುಮಾರ್ ಅವರನ್ನು



ಆತ್ಮೀಯವಾಗಿ ಬರಮಾಡಿಕೊಂಡರು.

ವಿಜಯದಶಮಿ ಅಂಗವಾಗಿ ದೇವಸ್ಥಾನದಿಂದ ಬನ್ನಿ ಮರದವರೆಗೆ ದೇವಿಯ ಪಲ್ಲಕ್ಕಿ ಮೆರವಣಿಗೆ ನಡೆಸಲಾಯಿತು. ಬಳಿಕ ಸಾಂಪ್ರದಾಯಿಕ ವಿಧಿವಿಧಾನಗಳೊಂದಿಗೆ ಅಂಬು ಉತ್ಸವವನ್ನು ನೆರವೇರಿಸಲಾಯಿತು. ಉತ್ಸವದ ಸಂದರ್ಭದಲ್ಲಿ ಭಕ್ತರು ದೇವಿಗೆ ವಿಶೇಷ ಪೂಜೆ ಸಲ್ಲಿಸಿ, ತಮ್ಮ ಕುಟುಂಬಗಳ ಸುಖ, ಶಾಂತಿ, ಆರೋಗ್ಯ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಂ.ಡಿ. ಕೀರ್ತಿಕುಮಾರ್ ಅವರು, ಜಗಳೂರು ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿ ಹಾಗೂ ಕ್ಷೇತ್ರದ ಜನರ ಸುಖ, ಶಾಂತಿ ಮತ್ತು ಸಮೃದ್ಧಿಗಾಗಿ ಶ್ರೀ ಚೌಡೇಶ್ವರಿ ದೇವಿಯಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.

ಧಾರ್ಮಿಕ ಆಚರಣೆಗಳು ಗ್ರಾಮೀಣ ಪ್ರದೇಶಗಳಲ್ಲಿ ಜನರನ್ನು ಒಗ್ಗೂಡಿಸುವುದರ ಜತೆಗೆ, ನಾಡಿನ ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಮಡ್ರಳ್ಳಿ ಗ್ರಾಮದಲ್ಲಿ ನಡೆದ ಅಂಬು ಉತ್ಸವವು ಭಕ್ತಿಭಾವದೊಂದಿಗೆ ಸಾಂಪ್ರದಾಯಿಕ ಆಚರಣೆಗಳ ವೈಭವಕ್ಕೆ ಸಾಕ್ಷಿಯಾಯಿತು.

ಉತ್ಸವದಲ್ಲಿ ಗ್ರಾಮದ ಭಕ್ತಾದಿಗಳು, ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಚೌಡೇಶ್ವರಿ ದೇವಿಯ ದಸರಾ ಅಂಬು ಉತ್ಸವದಲ್ಲಿ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಭಾಗಿ



“ಮುಂಜಾನೆಯ ಮೆರಗು”

ಜಗಳೂರು, ಅ.14– ತಾಲೂಕಿನ ಗುರುಸಿದ್ದಾಪುರ ಯಾನೆ ಮಾಡ್ರಹಳ್ಳಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಶ್ರೀ ಚೌಡೇಶ್ವರಿ ದೇವಿಯ ದಸರಾ ಅಂಗವಾಗಿ ಅಂಬು ಉತ್ಸವವನ್ನು ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಉತ್ಸವದಲ್ಲಿ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರು ಭಾಗವಹಿಸಿ, ಶ್ರೀ ಚೌಡೇಶ್ವರಿ ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ದೇವಿಯ ಆಶೀರ್ವಾದದಿಂದ ನಾಡಿನ ಸಮಸ್ತ ಜನತೆಗೆ ಸುಖ, ಶಾಂತಿ, ನೆಮ್ಮದಿ ಹಾಗೂ ಸಮೃದ್ಧಿ ದೊರೆಯಲಿ ಎಂದು ಪ್ರಾರ್ಥಿಸಿದರು.

ಗ್ರಾಮದಲ್ಲಿ ನಡೆದ ಧಾರ್ಮಿಕ ಉತ್ಸವದಲ್ಲಿ ಭಕ್ತರು ಪಾಲ್ಗೊಂಡು ದೇವಿಯ ದರ್ಶನ ಪಡೆದು ಭಕ್ತಿಭಾವ ಮೆರೆದರು. ಈ ಸಂದರ್ಭದಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ನವರಾತ್ರಿ ಅಂಗವಾಗಿ ನಿಮಿಷಾಂಬಾ ದೇವಿ ದೇವಸ್ಥಾನದಲ್ಲಿ ವಿಶೇಷ ಪಾರಾಯಣ

ಸೋಮವಂಶ ಆರ್ಯ ಕ್ಷತ್ರಿಯ ಸೇವಾ ಸಂಘದಿಂದ ಧಾರ್ಮಿಕ ಕಾರ್ಯಕ್ರಮ

“ಮುಂಜಾನೆಯ ಮೆರಗು”

ಜಗಳೂರು, ಅ.14– ಪಟ್ಟಣದ ಜೆ.ಸಿ.ಆರ್. ಬಡಾವಣೆಯಲ್ಲಿರುವ ನಿಮಿಷಾಂಬಾ ದೇವಿ ಹಾಗೂ ಗಣಪತಿ ದೇವಸ್ಥಾನದಲ್ಲಿ ನವರಾತ್ರಿ ಹಬ್ಬದ ಅಂಗವಾಗಿ ಭಕ್ತಿಭಾವದಿಂದ ದೇವಿಯ ಪಾರಾಯಣ ಹಾಗೂ ಅಷ್ಟೋತ್ತರ ಪಠಣ ಕಾರ್ಯಕ್ರಮ ನಡೆಯಿತು.

ಪಟ್ಟಣದ ಸೋಮವಂಶ ಆರ್ಯ ಕ್ಷತ್ರಿಯ ಸೇವಾ ಸಂಘದ ವತಿಯಿಂದ ಆಯೋಜಿಸಿದ್ದ ಧಾರ್ಮಿಕ ಕಾರ್ಯಕ್ರಮದಲ್ಲಿ ಭಕ್ತಾದಿಗಳು ಶ್ರದ್ಧಾಭಕ್ತಿಯಿಂದ ಪಾಲ್ಗೊಂಡು ನಿಮಿಷಾಂಬಾ ದೇವಿ ಹಾಗೂ ಗಣಪತಿ ದೇವರಿಗೆ ಪೂಜೆ ಸಲ್ಲಿಸಿದರು. ನವರಾತ್ರಿ ಹಬ್ಬದ ಮಹತ್ವವನ್ನು ಸಾರುವ ನಿಟ್ಟಿನಲ್ಲಿ ದೇವಿಯ ಪಾರಾಯಣ, ಅಷ್ಟೋತ್ತರ ಪಠಣ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು.

ನವರಾತ್ರಿ ಹಬ್ಬವು ಶಕ್ತಿ ಸ್ವರೂಪಿಣಿ ದುರ್ಗಾದೇವಿಯ ಆರಾಧನೆಗೆ ವಿಶೇಷ ಮಹತ್ವ ಹೊಂದಿದೆ. ಈ ಸಂದರ್ಭದಲ್ಲಿ ದೇವಿಯ ಆರಾಧನೆ, ಪಾರಾಯಣ ಹಾಗೂ ಪೂಜೆಗಳಲ್ಲಿ ಪಾಲ್ಗೊಳ್ಳುವುದರಿಂದ ಮನಸ್ಸಿಗೆ ನೆಮ್ಮದಿ ದೊರೆಯುವುದರ ಜೊತೆಗೆ ಧಾರ್ಮಿಕ ನಂಬಿಕೆ ಮತ್ತು ಆಧ್ಯಾತ್ಮಿಕ ಚಿಂತನೆಗಳು ವೃದ್ಧಿಯಾಗುತ್ತವೆ ಎಂಬ ಭಾವನೆ ಭಕ್ತರಲ್ಲಿದೆ.

ದೇವಿಯ ನಾಮಸ್ಮರಣೆ ಹಾಗೂ ಅಷ್ಟೋತ್ತರ ಪಠಣದೊಂದಿಗೆ ದೇವಸ್ಥಾನದಲ್ಲಿ ಭಕ್ತಿಮಯ ವಾತಾವರಣ ನಿರ್ಮಾಣವಾಗಿತ್ತು. ಭಕ್ತರು ಸಾಮೂಹಿಕವಾಗಿ ಪ್ರಾರ್ಥನೆ ಸಲ್ಲಿಸಿ ದೇವಿಯ ಕೃಪೆಗೆ ಪಾತ್ರರಾಗಲು ಭಕ್ತಿಯಿಂದ ಪೂಜಾ ಕೈಂಕರ್ಯಗಳಲ್ಲಿ ಪಾಲ್ಗೊಂಡರು.

ನವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮವು ಭಕ್ತರಲ್ಲಿ ಆಧ್ಯಾತ್ಮಿಕ ಉತ್ಸಾಹ ಮೂಡಿಸಿತು. ಇಂತಹ ಧಾರ್ಮಿಕ ಆಚರಣೆಗಳು ಸಮಾಜದಲ್ಲಿ ಭಕ್ತಿ, ಸೌಹಾರ್ದತೆ ಹಾಗೂ ಪರಸ್ಪರ



ಸಹಕಾರದ ಮನೋಭಾವವನ್ನು ಬೆಳೆಸಲು ಸಹಕಾರಿಯಾಗಿವೆ.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ರಾಹುಲ್ ಗಾಂಧಿ ನಿವಾಸದಲ್ಲಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಭೇಟಿ ಮತದಾನದ ಹಕ್ಕು, ಚುನಾವಣಾ ಪಾರದರ್ಶಕತೆ ಕುರಿತು ಚರ್ಚೆ

"ಮುಂಜಾನೆಯ ಮೆರಗು"

ದಾವಣಗೆರೆ ಅ, 14– ನವದೆಹಲಿಯ ಸುನಹರಿ ಬಾಗ್‌ನಲ್ಲಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನಿವಾಸದಲ್ಲಿ ಆಯೋಜಿಸಲಾಗಿದ್ದ ಚಹಾ ಕೂಟದ ಸಂದರ್ಭದಲ್ಲಿ ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಅವರನ್ನು ಭೇಟಿಯಾಗಿ ವಿವಿಧ ಪ್ರಮುಖ ವಿಷಯಗಳ ಕುರಿತು ಮಾತುಕತೆ ನಡೆಸಲಾಯಿತು.



ಕಳೆದ ಒಂದು ವಾರದಿಂದ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಇಂಡಿ–ಯಾ ಮೈತ್ರಿಕೂಟದ ಸಂಸದರು ನಡೆಸಿದ ಪ್ರತಿಭಟನೆಗಳು, ಪಾದಯಾತ್ರೆಗಳು ಹಾಗೂ ಮತದಾನದ ಹಕ್ಕು ಮತ್ತು ಚುನಾವಣಾ ವ್ಯವಸ್ಥೆಯ ಪಾರದರ್ಶಕತೆಗೆ ಸಂಬಂಧಿಸಿದ ವಿಚಾರಗಳ ಕುರಿತು ಈ ಸಂದರ್ಭದಲ್ಲಿ ಚರ್ಚಿಸಲಾಯಿತು.

ಪ್ರತಿಯೊಬ್ಬ ಅರ್ಹ ಮತದಾರನ ಮತದಾನದ ಹಕ್ಕು ರಕ್ಷಣೆಯಾಗಬೇಕು, ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಖಚಿತವಾಗಬೇಕು ಹಾಗೂ ಸಂವಿಧಾನದ ಮೌಲ್ಯಗಳನ್ನು ಎತ್ತಿಹಿಡಿಯಬೇಕು ಎಂಬ ಆಶಯದೊಂದಿಗೆ ಹೋರಾಟ ಮುಂದುವರಿಸುವ ಕುರಿತು ಚರ್ಚಿಸಲಾಯಿತು.

ಪ್ರಜಾಪ್ರಭುತ್ವದ ರಕ್ಷಣೆ, ಮತದಾನದ ಹಕ್ಕಿನ ಸಂರಕ್ಷಣೆ ಮತ್ತು ಚುನಾವಣಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವ ಉದ್ದೇಶದಿಂದ ಇಂಡಿ–ಯಾ ಮೈತ್ರಿಕೂಟದ ಹೋರಾಟ ನಿರಂತರವಾಗಿ ಮುಂದುವರಿಯಲಿದೆ ಎಂಬ ನಿಲುವನ್ನು ಈ ಸಂದರ್ಭದಲ್ಲಿ ವ್ಯಕ್ತಪಡಿಸಲಾಯಿತು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕನ ಮತದಾನ ಹಕ್ಕು ಮಹತ್ವದ್ದಾಗಿದ್ದು, ಆ ಹಕ್ಕಿನ ರಕ್ಷಣೆ ಹಾಗೂ ಸಂವಿಧಾನದ ಆಶಯಗಳ ಅನುಷ್ಠಾನಕ್ಕೆ ಬದ್ಧರಾಗಿರುವುದಾಗಿ ಮೈತ್ರಿಕೂಟದ ನಾಯಕರು ಪ್ರತಿಪಾದಿಸಿದ್ದಾರೆ.

ಮೈಸೂರಿನಲ್ಲಿ ಮತ್ಸ್ಯಲೋಕ ಪ್ರದರ್ಶನಕ್ಕೆ ಸಚಿವ ಕೆ.ಎಸ್. ಬಸವಂತಪ್ಪ ಭೇಟಿ

"ಮುಂಜಾನೆಯ ಮೆರಗು"

ಮೈಸೂರು ಅ, 14– ಮೀನುಗಾರಿಕಾ ಇಲಾಖೆ ವತಿಯಿಂದ ಮೈಸೂರಿನಲ್ಲಿ ಆಯೋಜಿಸಲಾಗಿರುವ ಆಕರ್ಷಕ ಮತ್ಸ್ಯಲೋಕ ಪ್ರದರ್ಶನಕ್ಕೆ ಸಚಿವ ಕೆ.ಎಸ್. ಬಸವಂತಪ್ಪ ಅವರು ಇಂದು ಭೇಟಿ ನೀಡಿ, ಪ್ರದರ್ಶನದ ವ್ಯವಸ್ಥೆಗಳು ಹಾಗೂ ವಿಶೇಷತೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.



ಮತ್ಸ್ಯಲೋಕ ಪ್ರದರ್ಶನದಲ್ಲಿ ಜಲಚರಗಳ ವೈವಿಧ್ಯಮಯ ಲೋಕವನ್ನು ಪರಿಚಯಿಸುವ ಉದ್ದೇಶದಿಂದ ಕೈಗೊಂಡಿರುವ ವ್ಯವಸ್ಥೆಗಳ ಬಗ್ಗೆ ಸಚಿವರು ಮಾಹಿತಿ ಪಡೆದರು. ಇಂತಹ ಪ್ರದರ್ಶನಗಳು ಸಾರ್ವಜನಿಕರಲ್ಲಿ ಜಲಚರಗಳ ಬಗೆಗಿನ ಆಸಕ್ತಿ ಹೆಚ್ಚಿಸುವುದರ ಜತೆಗೆ ಮೀನುಗಾರಿಕೆ ಕ್ಷೇತ್ರದ ವೈವಿಧ್ಯತೆ ಮತ್ತು ಮಹತ್ವವನ್ನು ತಿಳಿಯಲು ಸಹಕಾರಿಯಾಗುತ್ತವೆ ಎಂದು ಈ ಸಂದರ್ಭದಲ್ಲಿ ಗಮನ ಸೆಳೆಯಲಾಯಿತು.

ಮತ್ಸ್ಯಲೋಕ ಪ್ರದರ್ಶನವು ಸಾರ್ವಜನಿಕರ ವೀಕ್ಷಣೆಗೆ ಮುಕ್ತವಾಗಿದ್ದು, ಮಕ್ಕಳಿಂದ ಹಿಡಿದು ಹಿರಿಯರವರೆಗೆ ಎಲ್ಲ ವಯೋಮಾನದವರಿಗೂ ಆಕರ್ಷಕ ಅನುಭವ ನೀಡುವ ನಿರೀಕ್ಷೆಯಿದೆ. ಜಲಚರಗಳ ವೈವಿಧ್ಯಮಯ ಜಗತ್ತನ್ನು ಹತ್ತಿರದಿಂದ ಕಣ್ತುಂಬಿಕೊಳ್ಳಲು ಇದೊಂದು ಉತ್ತಮ ಅವಕಾಶವಾಗಿದೆ.

ಆದ್ದರಿಂದ ಮೈಸೂರಿನ ನಿವಾಸಿಗಳು ಹಾಗೂ ನಗರಕ್ಕೆ ಭೇಟಿ ನೀಡುವ ಪ್ರವಾಸಿಗರು ಕುಟುಂಬ ಸಮೇತರಾಗಿ ಮತ್ಸ್ಯಲೋಕ ಪ್ರದರ್ಶನಕ್ಕೆ ಆಗಮಿಸಿ, ಜಲಚರಗಳ ಮನಮೋಹಕ ಲೋಕವನ್ನು ವೀಕ್ಷಿಸಿ ವಿಶೇಷ ಅನುಭವ ಪಡೆಯುವಂತೆ ಆಹ್ವಾನಿಸಲಾಗಿದೆ.

ಅಪಘಾತದಲ್ಲಿ ಯುವಕ ಸಾವು: ಮೃತ ಕುಟುಂಬಕ್ಕೆ ಶಾಸಕ ದೇವೇಂದ್ರಪ್ಪ ಸಾಂತ್ವನ ವೈಯಕ್ತಿಕ ಆರ್ಥಿಕ ನೆರವು ವಿತರಣೆ; ಗಾಯಾಳುಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಲು ಸೂಚನೆ

"ಮುಂಜಾನೆಯ ಮೆರಗು"

ಜಗಳೂರು, ಅ.14– ತಾಲ್ಲೂಕಿನ ತಮಲೇಹಳ್ಳಿ ಗ್ರಾಮದ ಯುವಕ ಆಕನೂರು ಕ್ರಾಸ್ ಬಳಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದು, ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಘಟನೆ ತಿಳಿದ ಶಾಸಕ ಬಿ. ದೇವೇಂದ್ರಪ್ಪ ಅವರು ಮೃತನ ಕುಟುಂಬಕ್ಕೆ ವೈಯಕ್ತಿಕವಾಗಿ ಆರ್ಥಿಕ ನೆರವು ನೀಡಿ ಸಾಂತ್ವನ ಹೇಳಿದರು. ಗಾಯಾಳುಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡುವಂತೆ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿಗಳಿಗೆ ಸೂಚಿಸಿದರು.



ಘಟನೆ ವಿವರ: ಮಂಗಳವಾರ ಮಧ್ಯಾಹ್ನ ತಮಲೇಹಳ್ಳಿ ಗ್ರಾಮದ ಭಕ್ತರು ಆಕನೂರು ಗ್ರಾಮದ ಹೊಳೆಪೂಜೆಗೆ ಚೌಡೇಶ್ವರಿ ದೇವಿಯ ಉತ್ಸವಮೂರ್ತಿಯೊಂದಿಗೆ ತೆರಳಿದ್ದರು. ಇದೇ ಗ್ರಾಮದ ನಾಗರಾಜ್ (42) ಸೇರಿದಂತೆ ಇಬ್ಬರು ದ್ವಿಚಕ್ರವಾಹನದಲ್ಲಿ ಪೂಜೆಗೆ ತೆರಳಿದ್ದರು. ಪೂಜೆಗೆ ಅಗತ್ಯವಿದ್ದ ಸಾಮಗ್ರಿಗಳನ್ನು ತರಲು ದೊಣೆಹಳ್ಳಿ ಕಡೆಗೆ ತೆರಳುತ್ತಿದ್ದಾಗ, ಹಿಂದಿನಿಂದ ಬಂದ ಕಾರು ದ್ವಿಚಕ್ರವಾಹನಕ್ಕೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ. ಡಿಕ್ಕಿಯ ರಭಸಕ್ಕೆ ನಾಗರಾಜ್ ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ದ್ವಿಚಕ್ರವಾಹನದಲ್ಲಿದ್ದ ಮತ್ತೊಬ್ಬರು ಗಾಯಗೊಂಡಿದ್ದಾರೆ. ಇದೇ ವೇಳೆ ರಸ್ತೆಯಲ್ಲಿ ತೆರಳುತ್ತಿದ್ದ ಪಾದಚಾರಿಗೂ ಕಾರು ಡಿಕ್ಕಿ ಹೊಡೆದ ಪರಿಣಾಮ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ.



ಅಪಘಾತದಿಂದ ಕುಟುಂಬದ ಆಧಾರಸ್ತಂಭವನ್ನು ಕಳೆದುಕೊಂಡಿರುವ ಮೃತನ ಕುಟುಂಬಕ್ಕೆ ಶಾಸಕ ಬಿ. ದೇವೇಂದ್ರಪ್ಪ ಅವರು ಸಾಂತ್ವನ ಹೇಳಿ, ವೈಯಕ್ತಿಕ ಆರ್ಥಿಕ ನೆರವು ನೀಡುವ ಮೂಲಕ ಸಂಕಷ್ಟದ ಸಂದರ್ಭದಲ್ಲಿ ಕುಟುಂಬದ ನೆರವಿಗೆ ನಿಂತರು. ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ದೊರೆಯುವಂತೆ ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಇಷ್ಟಲಿಂಗ ಮಹಾಪೂಜೆ: ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಭಾಗಿ

"ಮುಂಜಾನೆಯ ಮೆರಗು"

ಜಮಖಂಡಿ ಅ, 14– ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕು ಕೇಂದ್ರದಲ್ಲಿ ಶರನ್ನವರಾತ್ರಿ ಮಹೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳ ಇಷ್ಟಲಿಂಗ ಮಹಾಪೂಜೆ ಹಾಗೂ ಧರ್ಮ ಸಂದೇಶ ಕಾರ್ಯಕ್ರಮದಲ್ಲಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಭಾಗವಹಿಸಿ, ಜಗದ್ಗುರುಗಳ ಆಶೀರ್ವಾದ ಪಡೆದರು.



ಕಾರ್ಯಕ್ರಮದಲ್ಲಿ ಜಗದ್ಗುರುಗಳು ನೀಡಿದ ಧಾರ್ಮಿಕ ಸಂದೇಶವನ್ನು ಆಲಿಸಿದ ಸಚಿವರು, ಭಕ್ತಿ, ಶ್ರದ್ಧೆ ಹಾಗೂ ಆಧ್ಯಾತ್ಮಿಕತೆಯಿಂದ ಕೂಡಿದ ಪವಿತ್ರ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವುದು ಸಂತಸ ತಂದಿದೆ ಎಂದು ತಿಳಿಸಿದರು.

ಶರನ್ನವರಾತ್ರಿ ಮಹೋತ್ಸವದ ಅಂಗವಾಗಿ ನಡೆದ ಇಷ್ಟಲಿಂಗ ಮಹಾಪೂಜೆ ಮತ್ತು ಧರ್ಮ ಸಂದೇಶ ಕಾರ್ಯಕ್ರಮವು ಭಕ್ತಿಭಾವದ ವಾತಾವರಣದಲ್ಲಿ ನಡೆಯಿತು. ಧಾರ್ಮಿಕ ಪರಂಪರೆ, ಆಧ್ಯಾತ್ಮಿಕ ಮೌಲ್ಯಗಳು ಹಾಗೂ ಧರ್ಮದ ಸಂದೇಶಗಳನ್ನು ಜನರಿಗೆ ತಲುಪಿಸುವ ಇಂತಹ ಕಾರ್ಯಕ್ರಮಗಳು ಸಮಾಜದಲ್ಲಿ ಭಕ್ತಿ ಮತ್ತು ಸೌಹಾರ್ದದ ಭಾವನೆಗಳನ್ನು ಬೆಳೆಸಲು ಸಹಕಾರಿಯಾಗುತ್ತವೆ.

108 ಆಂಬುಲೆನ್ಸ್ ನೌಕರರ ಮುಷ್ಕರದ ಎಚ್ಚರಿಕೆ: ಸರ್ಕಾರದ ವಿರುದ್ಧ ಆರ್. ಅಶೋಕ್ ವಾಗ್ದಾಳಿ ವೇತನ ಪರಿಷ್ಕರಣೆ, ಸಕಾಲದಲ್ಲಿ ಸಂಬಳ ಪಾವತಿ ಸೇರಿ ಹಲವು ಬೇಡಿಕೆ ಈಡೇರಿಸಲು ಆಗ್ರಹ

"ಮುಂಜಾನೆಯ ಮೆರಗು"

ಬೆಂಗಳೂರು ಅ, 14– ರಾಜ್ಯದಲ್ಲಿ ತುರ್ತು ಆರೋಗ್ಯ ಸೇವೆ ಒದಗಿಸುವ 108 ಆಂಬುಲೆನ್ಸ್ ನೌಕರರು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಮುಷ್ಕರದ ಎಚ್ಚರಿಕೆ ನೀಡಿರುವುದು ರಾಜ್ಯ ಸರ್ಕಾರದ ಗಮನ ಸೆಳೆದಿದ್ದು, ಈ ವಿಚಾರವಾಗಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಸೆಪ್ಟೆಂಬರ್ 22ರಂದು ನೌಕರರೊಂದಿಗೆ ಸಭೆ ನಡೆಸಿ ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿದ್ದರೂ, ಈವರೆಗೆ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿರುವ ಅವರು, ತುರ್ತು ಆರೋಗ್ಯ ಸೇವೆಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಯ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಆಗ್ರಹಿಸಿದ್ದಾರೆ.

ನೌಕರರ ವೇತನ ಪರಿಷ್ಕರಣೆ, ಎಲ್ಲರಿಗೂ ಏಕರೂಪದ ವೇತನ ವ್ಯವಸ್ಥೆ, ಸಕಾಲದಲ್ಲಿ ಸಂಬಳ ಪಾವತಿ ಹಾಗೂ ಅಪಘಾತದಲ್ಲಿ ಮೃತಪಟ್ಟ ಅಥವಾ ಶಾಶ್ವತ ಅಂಗವೈಕಲ್ಯಕ್ಕೆ ಒಳಗಾದ ಸಿಬ್ಬಂದಿಗೆ 50 ಲಕ್ಷ ಪರಿಹಾರ ಸೇರಿದಂತೆ ಹಲವು ಬೇಡಿಕೆಗಳು ಬಾಕಿ ಉಳಿದಿವೆ ಎಂದು ಆರ್. ಅಶೋಕ್ ತಿಳಿಸಿದ್ದಾರೆ.

ಆರೋಗ್ಯ ಸೇವೆಯಂತಹ ಮಹತ್ವದ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ನೌಕರರ ಸಮಸ್ಯೆಗಳನ್ನು ಮಾತುಕತೆಯ ಮೂಲಕ ಬಗೆಹರಿಸಬೇಕು. ನೌಕರರ ಅಹವಾಲುಗಳಿಗೆ ಸ್ಪಂದಿಸುವ ಬದಲು



ಬೆದರಿಕೆಯ ಮಾತುಗಳನ್ನಾಡುವುದು ಸರಿಯಲ್ಲ ಎಂದು ಆರೋಗ್ಯ ಇಲಾಖೆಯ ಕಾರ್ಯವೈಖರಿಯನ್ನು ಟೀಕಿಸಿದ್ದಾರೆ.

ತುರ್ತು ಆರೋಗ್ಯ ಸೇವೆಗೆ ಅಡ್ಡಿಯಾಗದಂತೆ ಕ್ರಮಕ್ಕೆ ಆಗ್ರಹ

108 ಆಂಬುಲೆನ್ಸ್ ಸೇವೆ ಸಾರ್ವಜನಿಕರ ಜೀವ ರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಇಂತಹ ಸೇವೆಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿ ಮುಷ್ಕರದ ಹಾದಿ ಹಿಡಿದರೆ ತುರ್ತು ಚಿಕಿತ್ಸೆಯ ಅಗತ್ಯವಿರುವ ರೋಗಿಗಳು ಹಾಗೂ ಅವರ ಕುಟುಂಬಗಳು ತೊಂದರೆ ಅನುಭವಿಸುವ ಸಾಧ್ಯತೆಯಿದೆ ಎಂದು ಆರ್. ಅಶೋಕ್ ಆತಂಕ ವ್ಯಕ್ತಪಡಿಸಿದ್ದಾರೆ.

ಆದ್ದರಿಂದ ಸರ್ಕಾರ ವಿಳಂಬ ಮಾಡದೆ ನೌಕರರ ಬೇಡಿಕೆಗಳ ಕುರಿತು ಚರ್ಚಿಸಿ, ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರ ಜೀವ ರಕ್ಷಣೆಗೆ ಆದ್ಯತೆ ನೀಡುವುದರ ಜೊತೆಗೆ ತುರ್ತು ಆರೋಗ್ಯ ಸೇವೆ ನಿರಂತರವಾಗಿ ಲಭ್ಯವಾಗುವಂತೆ ನೋಡಿಕೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಮೈಸೂರಿನ ಆಹಾರ ಮೇಳದ ಮೀನು ಖಾದ್ಯ ಮಳಿಗೆಗೆ ಸಚಿವ ಕೆ.ಎಸ್. ಬಸವಂತಪ್ಪ ಭೇಟಿ

"ಮುಂಜಾನೆಯ ಮೆರಗು"

ಮೈಸೂರು ಅ, 14– ಮೈಸೂರಿನಲ್ಲಿ ಆಯೋಜಿಸಿರುವ ಆಹಾರ ಮೇಳದಲ್ಲಿ ಮೀನುಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಆರಂಭಿಸಲಾಗಿರುವ ಮೀನು ಖಾದ್ಯಗಳ ಮಳಿಗೆಗೆ ಸಚಿವ ಕೆ.ಎಸ್. ಬಸವಂತಪ್ಪ ಅವರು ಇಂದು ಭೇಟಿ ನೀಡಿ ಪರಿಶೀಲಿಸಿದರು.



ಈ ಸಂದರ್ಭದಲ್ಲಿ ಮಳಿಗೆಯಲ್ಲಿ ಗ್ರಾಹಕರಿಗೆ ಪೂರೈಸಲಾಗುತ್ತಿರುವ ಮೀನು ಖಾದ್ಯಗಳ ಗುಣಮಟ್ಟ, ಸ್ವಚ್ಛತೆ ಹಾಗೂ ಆಹಾರ ತಯಾರಿಕೆಯ ಕುರಿತು ಮಾಹಿತಿ ಪಡೆದರು. ಗ್ರಾಹಕರಿಗೆ ತಾಜಾ, ಸ್ವಚ್ಛ ಹಾಗೂ ರುಚಿಕರವಾದ ಮೀನು ಖಾದ್ಯಗಳನ್ನು ಉತ್ತಮ ಗುಣಮಟ್ಟದಲ್ಲಿ ಒದಗಿಸಬೇಕು. ಆಹಾರ ತಯಾರಿಕೆ ಮತ್ತು ಪೂರೈಕೆಯಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಹಲವು ಸಲಹೆ–ಸೂಚನೆಗಳನ್ನು ನೀಡಿದರು.

ನಾಡಿನ ವಿವಿಧ ಭಾಗಗಳ ವೈವಿಧ್ಯಮಯ ಆಹಾರ ಸಂಸ್ಕೃತಿಯನ್ನು ಪರಿಚಯಿಸುವ ಆಹಾರ ಮೇಳಗಳು ಸ್ಥಳೀಯ ಉತ್ಪನ್ನಗಳು, ಆಹಾರೋದ್ಯಮ ಹಾಗೂ ಮೀನುಗಾರಿಕಾ ಕ್ಷೇತ್ರದ ಅಭಿವೃದ್ಧಿಗೆ ಉತ್ತೇಜನ ನೀಡುತ್ತವೆ. ಇಂತಹ ಮೇಳಗಳ ಮೂಲಕ ಮೀನು ಖಾದ್ಯಗಳ ವೈವಿಧ್ಯತೆಯನ್ನು ಜನರಿಗೆ ಪರಿಚಯಿಸುವುದರ ಜತೆಗೆ ಮೀನುಗಾರಿಕಾ ಕ್ಷೇತ್ರಕ್ಕೆ ಸಂಬಂಧಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಅವಕಾಶಗಳನ್ನು ವಿಸ್ತರಿಸಲು ಸಹಕಾರಿಯಾಗುತ್ತದೆ.

ಆಹಾರ ಮೇಳಕ್ಕೆ ಆಗಮಿಸುವ ಪ್ರತಿಯೊಬ್ಬ ಗ್ರಾಹಕರಿಗೂ ಉತ್ತಮ ಗುಣಮಟ್ಟದ ಆಹಾರ ಮತ್ತು ಉತ್ತಮ ಅನುಭವ ದೊರೆಯಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂಬ ಆಶಯವನ್ನು ಸಚಿವರು ವ್ಯಕ್ತಪಡಿಸಿದರು.

ಕರ್ನಾಟಕದಲ್ಲಿ ಹೂಡಿಕೆ ಅವಕಾಶಗಳ ಅನ್ವೇಷಣೆ: ಜೆಕ್ ಗಣರಾಜ್ಯದ ಉಪ ಪ್ರಧಾನಮಂತ್ರಿ ಕಾರೆಲ್ ಹವ್ಲಿಚೆಕ್ ಜೊತೆ ಡಿ.ಕೆ. ಶಿವಕುಮಾರ್ ಮಾತುಕತೆ

"ಮುಂಜಾನೆಯ ಮೆರಗು"

ಬೆಂಗಳೂರು ಅ, 14– ಕರ್ನಾಟಕದಲ್ಲಿ ಕೈಗಾರಿಕಾ ಹೂಡಿಕೆ ಮತ್ತು ತಂತ್ರಜ್ಞಾನ ಸಹಕಾರಕ್ಕೆ ಹೊಸ ಅವಕಾಶಗಳನ್ನು ಅನ್ವೇಷಿಸುವ ನಿಟ್ಟಿನಲ್ಲಿ ಜೆಕ್ ಗಣರಾಜ್ಯದ ಪ್ರಥಮ ಉಪ ಪ್ರಧಾನಮಂತ್ರಿ ಹಾಗೂ ಕೈಗಾರಿಕೆ ಮತ್ತು ವ್ಯಾಪಾರ ಸಚಿವರಾದ ಕಾರೆಲ್ ಹವ್ಲಿಚೆಕ್ ಅವರು ತಮ್ಮ ನಿಯೋಗದೊಂದಿಗೆ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಸಭೆಯಲ್ಲಿ ಇಂಧನ, ವಾಹನ ತಯಾರಿಕೆ, ಏರೋಸ್ಪೇಸ್, ರಕ್ಷಣಾ ವಲಯ ಹಾಗೂ ಸುಧಾರಿತ ಉತ್ಪಾದನಾ ಕ್ಷೇತ್ರಗಳಲ್ಲಿ ಹೂಡಿಕೆ ಅವಕಾಶಗಳ ಕುರಿತು ಚರ್ಚಿಸಲಾಯಿತು. ತಂತ್ರಜ್ಞಾನ ಮತ್ತು ನಾವೀನ್ಯತೆಯಲ್ಲಿ ಜೆಕ್ ಗಣರಾಜ್ಯ ಹೊಂದಿರುವ ಪರಿಣತಿಯನ್ನು ಕರ್ನಾಟಕದ ಕೈಗಾರಿಕಾ ಅಭಿವೃದ್ಧಿಗೆ ಬಳಸಿಕೊಳ್ಳುವ ಸಾಧ್ಯತೆಗಳ ಬಗ್ಗೆಯೂ ಸಮಾಲೋಚನೆ ನಡೆಯಿತು.

ಕರ್ನಾಟಕದಲ್ಲಿ ಹೊಸ ಕೈಗಾರಿಕಾ ಹೂಡಿಕೆಗಳನ್ನು ಆಕರ್ಷಿಸುವುದು, ಗುಣಮಟ್ಟದ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಹಾಗೂ ಸುಸ್ಥಿರ ಆರ್ಥಿಕ ಬೆಳವಣಿಗೆಗೆ ಉತ್ತೇಜನ ನೀಡುವುದು ಸಭೆಯ ಪ್ರಮುಖ ಆಶಯವಾಗಿತ್ತು.

ಜೆಕ್ ಗಣರಾಜ್ಯದ ತಾಂತ್ರಿಕ ಪರಿಣತಿ ಮತ್ತು ಕರ್ನಾಟಕದ ಕೈಗಾರಿಕಾ ಸಾಮರ್ಥ್ಯವನ್ನು ಪರಸ್ಪರ ಪೂರಕವಾಗಿ ಬಳಸಿಕೊಳ್ಳುವ ಮೂಲಕ ಕೈಗಾರಿಕಾ ವಲಯದಲ್ಲಿ ಸಹಕಾರವನ್ನು ಬಲಪಡಿಸುವ ಸಾಧ್ಯತೆಗಳ ಕುರಿತು ಉಭಯ ನಿಯೋಗಗಳು ಚರ್ಚಿಸಿದವು.



ಈ ಭೇಟಿಯು ಕರ್ನಾಟಕ ಮತ್ತು ಜೆಕ್ ಗಣರಾಜ್ಯದ ನಡುವಿನ ಕೈಗಾರಿಕಾ ಹಾಗೂ ಆರ್ಥಿಕ ಸಹಕಾರವನ್ನು ವಿಸ್ತರಿಸುವ ನಿಟ್ಟಿನಲ್ಲಿ ಮಹತ್ವ ಪಡೆದಿದೆ.

ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಶಶಿಲ್ ಜಿ. ನಮೋಶಿ ಬೆಂಬಲಕ್ಕೆ ಸಿ.ಟಿ. ರವಿ ಮನವಿ

"ಮುಂಜಾನೆಯ ಮೆರಗು"

ಕಲಬುರಗಿ ಅ, 14– ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಎನ್‌ಡಿಎ ಬೆಂಬಲಿತ ಅಭ್ಯರ್ಥಿ ಶಶಿಲ್ ಜಿ. ನಮೋಶಿ ಅವರನ್ನು ಬೆಂಬಲಿಸುವಂತೆ ಬಿಜೆಪಿ ನಾಯಕ ಸಿ.ಟಿ. ರವಿ ಮನವಿ ಮಾಡಿದರು. ಕಲಬುರಗಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕಾಗಿ ನಿರಂತರವಾಗಿ ಧ್ವನಿ ಎತ್ತುತ್ತಿರುವ ನಮೋಶಿ ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಬೆಂಬಲಿಸಬೇಕು ಎಂದು ಕೋರಿದರು.



ಶಿಕ್ಷಕರ ಹಕ್ಕುಗಳು, ಸೇವಾ ಸೌಲಭ್ಯಗಳು ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಶಶಿಲ್ ಜಿ. ನಮೋಶಿ ಅವರು ಕಳೆದ ನಾಲ್ಕು ಅವಧಿಗಳಿಂದ ಹೋರಾಟ ನಡೆಸಿಕೊಂಡು ಬಂದಿದ

ನಿರ್ಗಮಿತ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಡಿ.ಕೆ. ಶಿವಕುಮಾರ್ ಧನ್ಯವಾದ



"ಮುಂಜಾನೆಯ ಮೆರಗು"

ಬೆಂಗಳೂರು ಅ, 14– ಉಪಮುಖ್ಯಮಂತ್ರಿ ಹಾಗೂ ರಾಜ್ಯದ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ಅವರು ಇಂದು ಲೋಕಭವನದಲ್ಲಿ ಕರ್ನಾಟಕದ ನಿರ್ಗಮಿತ ರಾಜ್ಯಪಾಲರಾದ ಗೌರವಾನ್ವಿತ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿಯಾಗಿ, ರಾಜ್ಯ ಸರ್ಕಾರದ ಪರವಾಗಿ ಧನ್ಯವಾದಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ರಾಜ್ಯಪಾಲರೊಂದಿಗೆ ಸೌಹಾರ್ದಯುತವಾಗಿ ಮಾತುಕತೆ ನಡೆಸಿದ ಡಿ.ಕೆ. ಶಿವಕುಮಾರ್ ಅವರು, ಅವರ ಮುಂದಿನ ಜೀವನದ ಪಯಣ ಸುಗಮವಾಗಿರಲಿ ಹಾಗೂ ಭವಿಷ್ಯದಲ್ಲಿ ಉತ್ತಮ ಆರೋಗ್ಯ, ಸಂತೋಷ ಮತ್ತು ಯಶಸ್ಸು ದೊರೆಯಲಿ ಎಂದು ಶುಭ ಹಾರೈಸಿದರು.

ಸಂವಿಧಾನಾತ್ಮಕ ಹುದ್ದೆಯಲ್ಲಿರುವ ರಾಜ್ಯಪಾಲರು ಮತ್ತು ರಾಜ್ಯ ಸರ್ಕಾರದ ನಡುವಿನ ಸೌಹಾರ್ದಯುತ ಸಂಬಂಧಗಳು ಆಡಳಿತಾತ್ಮಕ ಕಾರ್ಯಚಟುವಟಿಕೆಗಳಿಗೆ ಮಹತ್ವದ್ದಾಗಿವೆ. ಈ ಹಿನ್ನೆಲೆಯಲ್ಲಿ ನಿರ್ಗಮಿತ ರಾಜ್ಯಪಾಲರನ್ನು ಭೇಟಿಯಾಗಿ ಸರ್ಕಾರದ ಪರವಾಗಿ ಕೃತಜ್ಞತೆ ಸಲ್ಲಿಸಿರುವುದು ಸೌಜನ್ಯದ ಭೇಟಿಯಾಗಿ ಗಮನ ಸೆಳೆಯಿತು.

ಲೋಕಭವನದಲ್ಲಿ ನಡೆದ ಈ ಭೇಟಿಯ ಸಂದರ್ಭದಲ್ಲಿ ರಾಜ್ಯದ ಆಡಳಿತ ವ್ಯವಸ್ಥೆ ಹಾಗೂ ಸಾರ್ವಜನಿಕ ಜೀವನದಲ್ಲಿ ಪರಸ್ಪರ ಗೌರವ ಮತ್ತು ಸೌಹಾರ್ದದ ಮಹತ್ವವನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಡಿ.ಕೆ. ಶಿವಕುಮಾರ್ ಅವರು ರಾಜ್ಯಪಾಲರಿಗೆ ಶುಭ ಕೋರಿದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಶಶಿಲ್ ಜಿ. ನಮೋಶಿ ಪರ ಶ್ರೀರಾಮುಲು ಮತಯಾಚನೆ



"ಮುಂಜಾನೆಯ ಮೆರಗು"

ಬಳ್ಳಾರಿ ಅ, 14– ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಎನ್‌ಡಿಎ ಬೆಂಬಲಿತ ಅಭ್ಯರ್ಥಿ ಶ್ರೀ ಶಶಿಲ್ ಜಿ. ನಮೋಶಿ ಅವರ ಪರವಾಗಿ ಮಾಜಿ ಸಚಿವ ಶ್ರೀರಾಮುಲು ಅವರು ಇಂದು ವಿವಿಧ ಶಾಲಾ–ಕಾಲೇಜುಗಳಿಗೆ ಭೇಟಿ ನೀಡಿ ಮತಯಾಚನೆ ನಡೆಸಿದರು.

ಶಂಕರ ಆನಂದ್ ಸಿಂಗ್ ಕಾಲೇಜು, ಟಿ.ಬಿ. ಡ್ಯಾಮ್ ಸರ್ಕಾರಿ ಪ್ರೌಢಶಾಲೆ ಮತ್ತು ಕಾಲೇಜು ಹಾಗೂ ಶ್ರೀ ಮಾರ್ಕಂಡೇಶ್ವರ ಆಂಗ್ಲ ಮಾಧ್ಯಮ ಪ್ರೌಢಶಾಲೆಗಳಿಗೆ ಭೇಟಿ ನೀಡಿದ ಅವರು, ಶಿಕ್ಷಕರೊಂದಿಗೆ ಸಂವಾದ ನಡೆಸಿ ಅಭ್ಯರ್ಥಿ ಶಶಿಲ್ ಜಿ. ನಮೋಶಿ ಅವರಿಗೆ ಬೆಂಬಲ ನೀಡುವಂತೆ ಮನವಿ ಮಾಡಿದರು.

ಶಿಕ್ಷಕರ ಸಮಸ್ಯೆಗಳು, ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿ ಹಾಗೂ ಶಿಕ್ಷಕರ ಹಿತಾಸಕ್ತಿಗಳ ಪರವಾಗಿ ವಿಧಾನ ಪರಿಷತ್ತಿನಲ್ಲಿ ಧ್ವನಿ ಎತ್ತುವ ಪ್ರತಿನಿಧಿಯ ಆಯ್ಕೆಯ ಮಹತ್ವವನ್ನು ಈ ಸಂದರ್ಭದಲ್ಲಿ ಪ್ರಸ್ತಾಪಿಸಲಾಯಿತು. ಚುನಾವಣೆಯಲ್ಲಿ ಶಿಕ್ಷಕರು ತಮ್ಮ ಮತದಾನದ ಮೂಲಕ ಅಭ್ಯರ್ಥಿಯನ್ನು ಬೆಂಬಲಿಸುವಂತೆ ಶ್ರೀರಾಮುಲು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ಶ್ರೀ ಸಂಜೀವ ರೆಡ್ಡಿ, ಮಂಡಲ ಅಧ್ಯಕ್ಷರಾದ ಶ್ರೀ ಶಂಕರ್ ಮೇಟಿ, ಜಿಲ್ಲಾ ಉಪಾಧ್ಯಕ್ಷರಾದ ಸಂದೀಪ್ ಸಿಂಗ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ, ಮುಖಂಡರಾದ ಶ್ರೀ ತಿಮ್ಮಪ್ಪ, ನಗರಸಭೆ ಸದಸ್ಯರಾದ ಶ್ರೀ ಬುಜ್ಜಿ ವೆಂಕಟೇಶ್ ಸೇರಿದಂತೆ ಶಾಲಾ–ಕಾಲೇಜುಗಳ ಪ್ರಾಂಶುಪಾಲರು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಅವರನ್ನು ಭೇಟಿಯಾದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ



"ಮುಂಜಾನೆಯ ಮೆರಗು"

ಬೆಂಗಳೂರು ಅ, 14– ರಾಜ್ಯದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ಬೆಂಗಳೂರಿನಲ್ಲಿರುವ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೋ) ಕೇಂದ್ರ ಕಚೇರಿ 'ಅಂತರಿಕ್ಷ ಭವನ'ದಲ್ಲಿ ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಅವರನ್ನು ಭೇಟಿ ಮಾಡಿ ಸೌಹಾರ್ದಯುತ ಮಾತುಕತೆ ನಡೆಸಿದರು.

ದೇಶದ ಬಾಹ್ಯಾಕಾಶ ಸಂಶೋಧನಾ ಕ್ಷೇತ್ರದಲ್ಲಿ ಮಹತ್ವದ ಪಾತ್ರ ವಹಿಸುತ್ತಿರುವ ಇಸ್ರೋ, ಉಪಗ್ರಹ ಉಡಾವಣೆ, ಬಾಹ್ಯಾಕಾಶ ತಂತ್ರಜ್ಞಾನ ಅಭಿವೃದ್ಧಿ ಹಾಗೂ ವೈಜ್ಞಾನಿಕ ಸಂಶೋಧನೆಗಳ ಮೂಲಕ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಇಂತಹ ಪ್ರಮುಖ ವೈಜ್ಞಾನಿಕ ಸಂಸ್ಥೆಯ ಮುಖ್ಯಸ್ಥರನ್ನು ಉಪಮುಖ್ಯಮಂತ್ರಿಗಳು ಭೇಟಿ ಮಾಡಿರುವುದು ಗಮನ ಸೆಳೆದಿದೆ.

ಈ ಭೇಟಿಯ ಸಂದರ್ಭದಲ್ಲಿ ಡಾ. ಜಿ. ಪರಮೇಶ್ವರ ಮತ್ತು ಡಾ. ವಿ. ನಾರಾಯಣನ್ ಅವರು ಪರಸ್ಪರ ಸೌಹಾರ್ದಯುತವಾಗಿ ವಿಚಾರ ವಿನಿಮಯ ಮಾಡಿಕೊಂಡರು.

ಸೇವಾ ಸಪ್ತಾಹದ ಅಂಗವಾಗಿ ಅಂಗನವಾಡಿ ಉತ್ಸವ ಮಕ್ಕಳಿಗೆ ಆಟಿಕೆ ಸಾಮಗ್ರಿ ವಿತರಿಸಿದ ಬಿ.ವೈ. ವಿಜಯೇಂದ್ರ



"ಮುಂಜಾನೆಯ ಮೆರಗು"

ಶಿರಾಳಕೊಪ್ಪ ಅ, 14– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 75ನೇ ಜನ್ಮದಿನಾಚರಣೆಯ ಅಂಗವಾಗಿ ಹಮ್ಮಿಕೊಂಡಿರುವ ಸೇವಾ ಸಪ್ತಾಹದ ಪ್ರಯುಕ್ತ ಶಿರಾಳಕೊಪ್ಪ ಪಟ್ಟಣದಲ್ಲಿ ಅಂಗನವಾಡಿ ಉತ್ಸವ ಕಾರ್ಯಕ್ರಮ ಆಯೋಜಿಸಲಾಗಿದ್ದು, ರಾಜ್ಯ ಬಿಜೆಪಿ ಅಧ್ಯಕ್ಷ ಹಾಗೂ ಶಿಕಾರಿಪುರ ಶಾಸಕ ಬಿ.ವೈ. ವಿಜಯೇಂದ್ರ ಅವರು ಅಂಗನವಾಡಿ ಮಕ್ಕಳಿಗೆ ಆಟಿಕೆ ಸಾಮಗ್ರಿಗಳನ್ನು ವಿತರಿಸಿದರು.

ಮಕ್ಕಳಲ್ಲಿ ಸಂತಸ ಮೂಡಿಸುವುದರ ಜೊತೆಗೆ ಅವರ ಕಲಿಕೆ ಮತ್ತು ಸರ್ವತೋಮುಖ ಬೆಳವಣಿಗೆಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಅಂಗನವಾಡಿಗಳ ಕಾರ್ಯಚಟುವಟಿಕೆಗಳು, ಮಕ್ಕಳ ಪೋಷಣೆ ಹಾಗೂ ಆರಂಭಿಕ ಶಿಕ್ಷಣದಲ್ಲಿ ಅಂಗನವಾಡಿ ಕೇಂದ್ರಗಳ ಪಾತ್ರದ ಕುರಿತು ಗಮನ ಹರಿಸಲಾಯಿತು.

ಅಂಗನವಾಡಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದ ವತಿಯಿಂದ ಒದಗಿಸಲಾಗುತ್ತಿರುವ ಸೌಲಭ್ಯಗಳು ಹಾಗೂ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅಂಗನವಾಡಿಗಳಿಗೆ ಕಲ್ಪಿಸಲಾದ ಸೌಲಭ್ಯಗಳನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.

ಮಕ್ಕಳಿಗೆ ಉತ್ತಮ ವಾತಾವರಣ, ಕಲಿಕೆಗೆ ಪೂರಕವಾದ ಸಾಮಗ್ರಿಗಳು ಮತ್ತು ಅಗತ್ಯ ಸೌಲಭ್ಯಗಳನ್ನು ಒದಗಿಸುವುದು ಅವರ ಭವಿಷ್ಯದ ದೃಷ್ಟಿಯಿಂದ ಮಹತ್ವದ್ದಾಗಿದೆ. ಮಕ್ಕಳ ಸಂತೋಷ ಹಾಗೂ ಅವರ ಸರ್ವತೋಮುಖ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮಗಳನ್ನು ಪ್ರೋತ್ಸಾಹಿಸುವ ಸಂಕಲ್ಪವನ್ನು ಈ ಉತ್ಸವದ ಮೂಲಕ ವ್ಯಕ್ತಪಡಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು, ಶಿರಾಳಕೊಪ್ಪ ನಗರ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಚೆನ್ನವೀರ ಶೆಟ್ಟರ್, ಮಹಿಳಾ ಮೋರ್ಚಾ ಅಧ್ಯಕ್ಷೆ ರೇಖಾ ರಾಜಶೇಖರ್, ಪ್ರಧಾನ ಕಾರ್ಯದರ್ಶಿ ಜಾನವಿ ಕೊಟ್ರೇಶ್, ಸೇರಿದಂತೆ ಹಲವು ಬಿಜೆಪಿ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಬರ ಪರಿಹಾರಕ್ಕೆ ಕೇಂದ್ರಕ್ಕೆ ಹೆಚ್ಚುವರಿ ಮೊತ್ತದ ಮನವಿ: ಜಿ. ಪರಮೇಶ್ವರ

226 ತಾಲೂಕುಗಳು ಬರಪೀಡಿತ ಘೋಷಣೆ ಹಂತದಲ್ಲಿ



"ಮುಂಜಾನೆಯ ಮೆರಗು"

ಬೆಂಗಳೂರು ಅ, 14– ರಾಜ್ಯದಲ್ಲಿ ಬರದಿಂದ ಉಂಟಾಗಿರುವ ನಷ್ಟದ ಕುರಿತು ಅಂತಿಮ ಮೆಮೊರಾಂಡಮ್ ಸಿದ್ಧಪಡಿಸುವ ಪ್ರಕ್ರಿಯೆ ನಡೆಯುತ್ತಿದ್ದು, ಬಹುಶಃ ಇನ್ನೊಂದು ವಾರದಲ್ಲಿ ಪೂರ್ಣಗೊಳ್ಳಲಿದೆ. ಈ ಬಾರಿ ರಾಜ್ಯಾದ್ಯಂತ ಬರದ ಪರಿಣಾಮ ಉಂಟಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದಿಂದ ಹೆಚ್ಚಿನ ಪರಿಹಾರ ಕೋರುವ ಸಾಧ್ಯತೆಯಿದೆ ಎಂದು ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ ತಿಳಿಸಿದರು.

ತಮ್ಮ ನಿವಾಸದ ಬಳಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಇಂದು ಮತ್ತೆ ಒಂಬತ್ತು ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗುತ್ತಿದ್ದು, ಇದರಿಂದ ಬರಪೀಡಿತ ತಾಲೂಕುಗಳ ಸಂಖ್ಯೆ 226ಕ್ಕೆ ಏರಿಕೆಯಾಗಲಿದೆ ಎಂದು ಹೇಳಿದರು.

ಈ ತಾಲೂಕುಗಳಲ್ಲಿ ಗ್ರೌಂಡ್ ಟ್ರೂಥಿಂಗ್ ಪ್ರಕ್ರಿಯೆ ಪೂರ್ಣಗೊಂಡಿದೆ. ಇನ್ನುಳಿದ ಕೆಲವು ತಾಲೂಕುಗಳಲ್ಲಿ ಟ್ರಿಗರ್–1 ಮಾನದಂಡಗಳ ಪರಿಶೀಲನೆ ನಡೆಯುತ್ತಿದೆ. ಪರಿಶೀಲನೆಯಲ್ಲಿ ಅರ್ಹತೆ ಪಡೆಯುವ ತಾಲೂಕುಗಳನ್ನು ಗ್ರೌಂಡ್ ಟ್ರೂಥಿಂಗ್ ಪ್ರಕ್ರಿಯೆಗೆ ಒಳಪಡಿಸಲಾಗುವುದು. ಅಂತಿಮ ಮೆಮೊರಾಂಡಮ್ ಸಿದ್ಧಪಡಿಸುವ ವೇಳೆಗೆ ರಾಜ್ಯದಲ್ಲಿ ಬರದಿಂದ ಉಂಟಾಗಿರುವ ಒಟ್ಟು ನಷ್ಟದ ಅಂದಾಜು ಸ್ಪಷ್ಟವಾಗಲಿದೆ ಎಂದು ತಿಳಿಸಿದರು.

ಕೇಂದ್ರದಿಂದ ಹೆಚ್ಚಿನ ಪರಿಹಾರಕ್ಕೆ ಮನವಿ

ಬರದಿಂದ ಉಂಟಾಗಿರುವ ನಷ್ಟದ ಪ್ರಮಾಣಕ್ಕೆ ಅನುಗುಣವಾಗಿ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ನಿಧಿ (ಎನ್‌ಡಿಆರ್‌ಎಫ್) ಮಾರ್ಗಸೂಚಿಗಳ ಪ್ರಕಾರ ಪರಿಹಾರದ ಮೊತ್ತವನ್ನು ಲೆಕ್ಕಹಾಕಿ ಕೇಂದ್ರಕ್ಕೆ ಮನವಿ ಸಲ್ಲಿಸಲಾಗುವುದು. ಕಳೆದ ವರ್ಷ ಸುಮಾರು 18,000 ಕೋಟಿ ರೂ. ಪರಿಹಾರ ಕೋರಲಾಗಿತ್ತು. ಈ ಬಾರಿ ರಾಜ್ಯದಾದ್ಯಂತ ಬರದ ಪರಿಣಾಮ ಉಂಟಾಗಿದ್ದು, ಈಗಾಗಲೇ 226 ತಾಲೂಕುಗಳು ಬರಪೀಡಿತ ತಾಲೂಕುಗಳೆಂದು ಘೋಷಿಸುವ ಹಂತ ತಲುಪಿವೆ. ಇನ್ನಷ್ಟು ತಾಲೂಕುಗಳು ಅರ್ಹತೆ ಪಡೆದರೆ ನಷ್ಟದ ಪ್ರಮಾಣವೂ ಹೆಚ್ಚಾಗಲಿದೆ. ಹೀಗಾಗಿ, ಈ ಬಾರಿ ಕೇಂದ್ರದಿಂದ ಹೆಚ್ಚಿನ ಪರಿಹಾರ ಕೋರಬೇಕಾದ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಹೇಳಿದರು.

ಬರ ಪರಿಹಾರಕ್ಕೆ ಸಂಬಂಧಿಸಿದಂತೆ ಎನ್‌ಡಿಆರ್‌ಎಫ್ ಮಾರ್ಗಸೂಚಿಗಳನ್ನು ಸಡಿಲಗೊಳಿಸುವಂತೆ ರಾಜ್ಯ ಸರ್ಕಾರ ಕೇಂದ್ರಕ್ಕೆ ಮನವಿ ಸಲ್ಲಿಸಿದೆ. ಈ ಕುರಿತು ತಾವು ಮತ್ತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪತ್ರ ಬರೆದಿದ್ದೇವೆ. ಇದಕ್ಕೆ ಸಂಬಂಧಿಸಿದಂತೆ ಕೇಂದ್ರ ಕೃಷಿ ಸಚಿವರಿಂದ ಪತ್ರ ಬಂದಿದ್ದು, ಮನವಿಯನ್ನು ಪರಿಶೀಲಿಸುವುದಾಗಿ ತಿಳಿಸಿದ್ದಾರೆ. ಇದನ್ನು ಹೊರತುಪಡಿಸಿ ಕೇಂದ್ರದಿಂದ ಬೇರೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಸ್ಪಷ್ಟಪಡಿಸಿದರು.

ಅಂತಿಮ ಮೆಮೊರಾಂಡಮ್ ಸಿದ್ಧವಾದ ಬಳಿಕ ಮುಖ್ಯಮಂತ್ರಿ, ತಾವು ಹಾಗೂ ಇತರರನ್ನು ಒಳಗೊಂಡ ನಿಯೋಗ ದೆಹಲಿಗೆ ಭೇಟಿ ನೀಡುವ ಕುರಿತು ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. ನಿಯೋಗವು ಖುದ್ದಾಗಿ ದೆಹಲಿಗೆ ತೆರಳಿ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಿ, ರಾಜ್ಯದಲ್ಲಿ ಉಂಟಾಗಿರುವ ನಷ್ಟದ ವಿವರಗಳನ್ನು ನೀಡಿ ಸೂಕ್ತ ಪರಿಹಾರ ಒದಗಿಸುವಂತೆ ಮನವಿ ಮಾಡಲಿದೆ ಎಂದರು.

ಎಸ್‌ಸಿ–ಎಸ್‌ಟಿ ಮೀಸಲಾತಿ: ಸಂಪುಟ ಸಭೆಯಲ್ಲಿ ಚರ್ಚೆ

ಎಸ್‌ಸಿ–ಎಸ್‌ಟಿ ಮೀಸಲಾತಿಗೆ ಸಂಬಂಧಿಸಿದಂತೆ ಹೈಕೋರ್ಟ್ ನೀಡಿರುವ ತೀರ್ಪಿನ ಕುರಿತು ನಾಳೆ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ ತಿಳಿಸಿದರು.

ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬೇಕೇ ಅಥವಾ ಮೀಸಲಾತಿ ಸಂಬಂಧಿತ ವಿಷಯವನ್ನು ಸಂವಿಧಾನದ ಒಂಬತ್ತನೇ ಅನುಸೂಚಿಗೆ ಸೇರಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಬೇಕೇ ಎಂಬ ಬಗ್ಗೆ ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಬೇಕಿದೆ. ಸಚಿವ ಸಂಪುಟದ ನಿರ್ಧಾರದ ಬಳಿಕ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ವಿಕೇಂದ್ರೀಕರಣ ಯೋಜನೆಗಳ ಪ್ರಗತಿ ಪರಿಶೀಲನೆ



"ಮುಂಜಾನೆಯ ಮೆರಗು"

ಬೆಂಗಳೂರು ಅ, 14– ಉಪಮುಖ್ಯಮಂತ್ರಿ ಹಾಗೂ ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಸಭೆಯಲ್ಲಿ ಸಮಿತಿಯ ಸದಸ್ಯರು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಂದ ವಿವಿಧ ಯೋಜನೆಗಳ ಅನುಷ್ಠಾನ ಮತ್ತು ಪ್ರಗತಿಯ ಕುರಿತು ಮಾಹಿತಿ ಪಡೆದುಕೊಂಡ ಡಿ.ಕೆ. ಶಿವಕುಮಾರ್ ಅವರು, ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಅಗತ್ಯ ಸೂಚನೆಗಳನ್ನು ನೀಡಿದರು.

ರಾಜ್ಯದಲ್ಲಿ ವಿಕೇಂದ್ರೀಕೃತ ಯೋಜನೆಗಳ ಮೂಲಕ ಅಭಿವೃದ್ಧಿ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು, ಸ್ಥಳೀಯ ಮಟ್ಟದಲ್ಲಿ ಅಭಿವೃದ್ಧಿ ಚಟುವಟಿಕೆಗಳಿಗೆ ಉತ್ತೇಜನ ನೀಡುವುದು ಹಾಗೂ ಯೋಜನೆಗಳ ಪ್ರಗತಿಯನ್ನು ಕಾಲಕಾಲಕ್ಕೆ ಪರಿಶೀಲಿಸುವುದು ಇಂತಹ ಸಭೆಗಳ ಪ್ರಮುಖ ಉದ್ದೇಶವಾಗಿದೆ.

ಯೋಜನೆಗಳ ಅನುಷ್ಠಾನದಲ್ಲಿ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸುವುದು ಹಾಗೂ ನಿಗದಿತ ಗುರಿಗಳ ಸಾಧನೆಗೆ ಆದ್ಯತೆ ನೀಡುವುದು ಆಡಳಿತಾತ್ಮಕವಾಗಿ ಮಹತ್ವದ್ದಾಗಿದೆ. ಈ ಹಿನ್ನೆಲೆಯಲ್ಲಿ ಸಭೆಯಲ್ಲಿ ಅಧಿಕಾರಿಗಳು ಮತ್ತು ಸಮಿತಿಯ ಸದಸ್ಯರಿಂದ ಮಾಹಿತಿ ಪಡೆದು ಮುಂದಿನ ಕ್ರಮಗಳ ಕುರಿತು ಅಗತ್ಯ ಮಾರ್ಗದರ್ಶನ ನೀಡಲಾಯಿತು.

ಸಭೆಯಲ್ಲಿ ಪಾಲ್ಗೊಂಡಿದ್ದ ಅಧಿಕಾರಿಗಳು ಹಾಗೂ ಸಮಿತಿಯ ಸದಸ್ಯರು ವಿವಿಧ ಅಭಿವೃದ್ಧಿ ಯೋಜನೆಗಳ ಪ್ರಗತಿ ಕುರಿತು ಮಾಹಿತಿ ನೀಡಿದರು.

ಸೇವಾ ಸಪ್ತಾಹದ ಅಂಗವಾಗಿ ರುದ್ರಭೂಮಿಯಲ್ಲಿ ಸ್ವಚ್ಛತಾ ಅಭಿಯಾನ



"ಮುಂಜಾನೆಯ ಮೆರಗು"

ಶಿಕಾರಿಪುರ ಅ, 14– ಸ್ವಚ್ಛ ಪರಿಸರ ನಿರ್ಮಾಣದ ಸಂಕಲ್ಪದೊಂದಿಗೆ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಸಾರುವ ನಿಟ್ಟಿನಲ್ಲಿ, ಸೇವಾ ಸಪ್ತಾಹದ ಅಂಗವಾಗಿ ರಾಜ್ಯ ಬಿಜೆಪಿ ಅಧ್ಯಕ್ಷ ಹಾಗೂ ಶಿಕಾರಿಪುರ ಶಾಸಕ ಬಿ.ವೈ.ವಿಜಯೇಂದ್ರ ಅವರ ನೇತೃತ್ವದಲ್ಲಿ ಪಟ್ಟಣದ ಹೊನ್ನಾಳಿ ರಸ್ತೆಯಲ್ಲಿರುವ ರುದ್ರಭೂಮಿಯಲ್ಲಿ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಯಿತು.

ಬುಧವಾರ ಬೆಳಿಗ್ಗೆ ನಡೆದ ಅಭಿಯಾನದಲ್ಲಿ ರುದ್ರಭೂಮಿ ಆವರಣವನ್ನು ಸ್ವಚ್ಛಗೊಳಿಸುವ ಮೂಲಕ ಸ್ವಚ್ಛತೆ ಹಾಗೂ ಪರಿಸರ ಸಂರಕ್ಷಣೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲಾಯಿತು. ಸಾರ್ವಜನಿಕ ಸ್ಥಳಗಳ ಸ್ವಚ್ಛತೆ ಕಾಪಾಡುವುದು ಹಾಗೂ ಸ್ವಚ್ಛ ಪರಿಸರ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂಬ ಸಂದೇಶವನ್ನು ಈ ಅಭಿಯಾನದ ಮೂಲಕ ಸಾರಲಾಯಿತು.

ವಿಶೇಷವಾಗಿ ಶಿಕಾರಿಪುರದ ಪರೋಪಕಾರಂ ತಂಡದ ಸದಸ್ಯರು ಹಾಗೂ ಜಿಸಿಐ ತಂಡದ ಸದಸ್ಯರು ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸ್ವಚ್ಛತಾ ಕಾರ್ಯಕ್ಕೆ ಕೈಜೋಡಿಸಿದರು.

ಸೇವಾ ಸಪ್ತಾಹದ ಅಂಗವಾಗಿ ಹಮ್ಮಿಕೊಂಡ ಈ ಕಾರ್ಯಕ್ರಮವು ಸಾರ್ವಜನಿಕ ಸ್ಥಳಗಳ ಸ್ವಚ್ಛತೆ, ಪರಿಸರ ಜಾಗೃತಿ ಹಾಗೂ ಸಾಮಾಜಿಕ ಸೇವೆಯಲ್

ಅಣಬೂರು ಜಿ.ಪಂ. ಕ್ಷೇತ್ರದಲ್ಲಿ ಬಿಜೆಪಿ ಟಿಕೆಟ್‌ಗೆ ಬಿಸ್ತುವಳ್ಳಿ ಬಾಬು ಪ್ರಬಲ ಆಕಾಂಕ್ಷಿ

ಯುವ ಸಂಘಟನೆ, ರಾಜಕೀಯ ಅನುಭವ ಹಾಗೂ ಗ್ರಾಮೀಣ ಜನರೊಂದಿಗಿನ ಒಡನಾಟವೇ ಬಲ

"ಮುಂಜಾನೆಯ ಮೆರಗು"

ಜಗಳೂರು ಅ, 14– ತಾಲೂಕಿನ ಅಣಬೂರು ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ ಬಿಜೆಪಿ ಟಿಕೆಟ್‌ಗಾಗಿ ರಾಜಕೀಯ ಚಟುವಟಿಕೆಗಳು ಗರಿಗೆದರಿದ್ದು, ಹಲವು ವರ್ಷಗಳಿಂದ ಪಕ್ಷದ ಸಂಘಟನೆ ಹಾಗೂ ಗ್ರಾಮೀಣ ಭಾಗದಲ್ಲಿ ಯುವಕರನ್ನು ಒಗ್ಗೂಡಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಬಿಸ್ತುವಳ್ಳಿ ಬಾಬು ಅವರು ಪ್ರಬಲ ಆಕಾಂಕ್ಷಿಯಾಗಿ ಹೊರಹೊಮ್ಮಿದ್ದಾರೆ.

ಅಣಬೂರು ಜಿಲ್ಲಾ ಪಂಚಾಯಿತಿ ಕ್ಷೇತ್ರವು ಪರಿಶಿಷ್ಟ ಪಂಗಡದ (ಎಸ್‌ಟಿ) ಮಹಿಳಾ ಮೀಸಲಾತಿಗೆ ಒಳಪಟ್ಟಿರುವ ಹಿನ್ನೆಲೆಯಲ್ಲಿ, ಈ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಕುರಿತು ರಾಜಕೀಯ ವಲಯದಲ್ಲಿ ಚರ್ಚೆಗಳು ನಡೆಯುತ್ತಿವೆ. ಈ ನಡುವೆ, ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಯುವಕರೊಂದಿಗೆ ಸಂಪರ್ಕ ಹೊಂದಿರುವ ಬಿಸ್ತುವಳ್ಳಿ ಬಾಬು ಅವರ ರಾಜಕೀಯ ಹಿನ್ನೆಲೆ ಮತ್ತು ಸಂಘಟನಾ ಚಟುವಟಿಕೆಗಳು ಗಮನ ಸೆಳೆಯುತ್ತಿವೆ.

ಪೊಲೀಸ್ ಇಲಾಖೆಯಿಂದ ರಾಜಕೀಯ ಕ್ಷೇತ್ರಕ್ಕೆ

ಬಿಸ್ತುವಳ್ಳಿ ಬಾಬು ಅವರು 2006ರಲ್ಲಿ ಪೊಲೀಸ್ ಇಲಾಖೆಗೆ ಸೇರ್ಪಡೆಯಾಗಿ ದಾವಣಗೆರೆ ನಗರದ ಬಡಾವಣೆ ಪ್ರದೇಶದಲ್ಲಿ ಸುಮಾರು ನಾಲ್ಕು ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು. ಬಳಿಕ ಸರ್ಕಾರಿ ಸೇವೆಗೆ ರಾಜೀನಾಮೆ ನೀಡಿ ರಾಜಕೀಯ ಮತ್ತು ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರು. 2010ರಿಂದ ಜಗಳೂರು ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಿಗೆ ಭೇಟಿ ನೀಡುತ್ತಾ ಯುವಕರನ್ನು ಸಂಘಟಿಸುವುದು ಹಾಗೂ ಸ್ಥಳೀಯ ಮಟ್ಟದಲ್ಲಿ ಜನರೊಂದಿಗೆ ಸಂಪರ್ಕ ಬೆಳೆಸುವುದಕ್ಕೆ ಆದ್ಯತೆ ನೀಡುತ್ತಾ ಬಂದಿದ್ದಾರೆ.

ಕಾಂಗ್ರೆಸ್ ಪಕ್ಷದ ಮೂಲಕ ರಾಜಕೀಯ ಜೀವನ ಆರಂಭಿಸಿದ ಅವರು, ತಾಲೂಕು ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು. ನಂತರ ದಾವಣಗೆರೆ ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷರಾಗಿ ಎರಡು ಬಾರಿ ಚುನಾವಣೆಯ ಮೂಲಕ



ಆಯ್ಕೆಯಾಗಿದ್ದರು. ಈ ಮೂಲಕ ಯುವ ಕಾಂಗ್ರೆಸ್ ಸಂಘಟನೆಯಲ್ಲಿ ತಮ್ಮದೇ ಆದ ಗುರುತನ್ನು ಮೂಡಿಸಿಕೊಂಡಿದ್ದರು.

2011ರ ವಿಧಾನಸಭಾ ಉಪಚುನಾವಣೆಯ ಸಂದರ್ಭದಲ್ಲಿ ಅಭ್ಯರ್ಥಿ ಆಯ್ಕೆಯ ಚರ್ಚೆಯಲ್ಲಿ ಬಿಸ್ತುವಳ್ಳಿ ಬಾಬು ಅವರ ಹೆಸರೂ ಪ್ರಸ್ತಾಪವಾಗಿತ್ತು. ದೆಹಲಿವರೆಗೂ ಇವರ ಹೆಸರು ತಲುಪಿತ್ತು, ಅಂತಿಮವಾಗಿ ಟಿಕೆಟ್ ದೊರೆಯದ ಕಾರಣ ಸ್ಪರ್ಧಿಸುವ ಅವಕಾಶ ಸಿಕ್ಕಿರಲಿಲ್ಲ. 2013ರ ವಿಧಾನಸಭಾ ಚುನಾವಣೆಯಲ್ಲಿಯೂ ಕಾಂಗ್ರೆಸ್ ಟಿಕೆಟ್‌ಗಾಗಿ ಪ್ರಯತ್ನಿಸಿದ್ದರು. ಆದರೆ, ಪಕ್ಷದ ವರಿಷ್ಠರು ಹೆಚ್.ಪಿ.ರಾಜೇಶ್ ಅವರಿಗೆ ಟಿಕೆಟ್ ನೀಡಿದ ಹಿನ್ನೆಲೆಯಲ್ಲಿ ಪಕ್ಷದ ಅಧಿಕೃತ ಅಭ್ಯರ್ಥಿಯ ಪರವಾಗಿ ಕ್ಷೇತ್ರದಲ್ಲಿ ಸಂಘಟನಾತ್ಮಕವಾಗಿ ಕೆಲಸ ಮಾಡುವ ಮೂಲಕ ಕಾಂಗ್ರೆಸ್ ಅಭ್ಯರ್ಥಿ ಹೆಚ್.ಪಿ.ರಾಜೇಶ್ ಗೆಲುವಿಗೆ ಶ್ರಮಿಸಿದ್ದರು.

ಬಿಜೆಪಿಗೆ ಸೇರ್ಪಡೆ ಬಳಿಕ ಪಕ್ಷ ಸಂಘಟನೆ

ಕಾರಣಾಂತರಗಳಿಂದ 2017ರಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಯಾದ ಬಿಸ್ತುವಳ್ಳಿ ಬಾಬು ಅವರು, 2018ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿದ್ದ ಎಸ್.ವಿ.ರಾಮಚಂದ್ರ ಅವರ ಪರವಾಗಿ ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದರು. ತಮ್ಮ ಸಂಪರ್ಕದಲ್ಲಿದ್ದ ಯುವಕರನ್ನು ಒಗ್ಗೂಡಿಸಿ ಪಕ್ಷದ ಅಭ್ಯರ್ಥಿಯ ಗೆಲುವಿಗಾಗಿ ಶ್ರಮಿಸಿದ್ದರು.

ಬಿಜೆಪಿಗೆ ಸೇರ್ಪಡೆಯಾದ ಬಳಿಕವೂ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಕಾರ್ಯಕರ್ತರು ಮತ್ತು ಯುವಕರೊಂದಿಗೆ ಸಂಪರ್ಕ ಮುಂದುವರಿಸಿಕೊಂಡು ಬಂದಿರುವ ಅವರು, ಪಕ್ಷದ ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವ ಮೂಲಕ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಅವಕಾಶ ದೊರೆಯುವ ನಿರೀಕ್ಷೆ ಹೊಂದಿದ್ದಾರೆ.

ಯುವಕರು, ಕ್ರೀಡೆ ಮತ್ತು ಗ್ರಾಮೀಣ ಕಾರ್ಯಕ್ರಮಗಳಿಗೆ ಪ್ರೋತ್ಸಾಹ

ರಾಜಕೀಯ ಚಟುವಟಿಕೆಗಳ ಜತೆಗೆ ಗ್ರಾಮೀಣ ಭಾಗದ ಯುವಕರನ್ನು ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳತ್ತ ಪ್ರೋತ್ಸಾಹಿಸುವ ಕಾರ್ಯದಲ್ಲಿಯೂ ಬಿಸ್ತುವಳ್ಳಿ ಬಾಬು ತೊಡಗಿಸಿಕೊಂಡಿದ್ದಾರೆ. ವಿವಿಧ ಗ್ರಾಮಗಳಲ್ಲಿ ಯುವಕರು ಆಯೋಜಿಸುವ ಕ್ರೀಡಾಕೂಟಗಳಿಗೆ ತಮ್ಮ ಕೈಲಾದ ಸಹಕಾರ ಮತ್ತು ಪ್ರೋತ್ಸಾಹ ಧನ ನೀಡುತ್ತಾ ಬಂದಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿ ನಡೆಯುವ ಜಾತ್ರೆ,ಸಾಂಸ್ಕೃತಿಕಕಾರ್ಯಕ್ರಮಗಳುಹಾಗೂ ನಾಟಕ ಪ್ರದರ್ಶನಗಳಲ್ಲಿ ಭಾಗವಹಿಸುವ ಮೂಲಕ ಸ್ಥಳೀಯರೊಂದಿಗೆ ಒಡನಾಟ ಬೆಳೆಸಿಕೊಂಡಿದ್ದಾರೆ. ಯುವಕರ ತಂಡವನ್ನು ಸಂಘಟಿಸುವುದು, ಗ್ರಾಮ ಮಟ್ಟದಲ್ಲಿ ನಡೆಯುವ ಕಾರ್ಯಕ್ರಮಗಳಿಗೆ ಸ್ಪಂದಿಸುವುದು ಮತ್ತು ಸಾರ್ವಜನಿಕರೊಂದಿಗೆ ನಿರಂತರ ಸಂಪರ್ಕ ಹೊಂದಿರುವುದನ್ನು ತಮ್ಮ ರಾಜಕೀಯ ಚಟುವಟಿಕೆಗಳ ಭಾಗವಾಗಿಸಿಕೊಂಡಿದ್ದಾರೆ.

ಈ ಚಟುವಟಿಕೆಗಳ ಮೂಲಕ ಅಣಬೂರು ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ ತಮ್ಮ ರಾಜಕೀಯ ನೆಲೆ ಬಲಪಡಿಸಿಕೊಳ್ಳುವ ಪ್ರಯತ್ನ ನಡೆಸುತ್ತಿದ್ದಾರೆ. ಇದೀಗ ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸುವ ಅವಕಾಶ ದೊರೆಯಬಹುದೆಂಬ ನಿರೀಕ್ಷೆಯಲ್ಲಿ ಟಿಕೆಟ್‌ಗಾಗಿ ಪ್ರಯತ್ನ ಮುಂದುವರಿಸಿದ್ದಾರೆ.

ಬಿಸ್ತುವಳ್ಳಿ ಬಾಬು ಅವರ ರಾಜಕೀಯ ಅನುಭವ, ಸಂಘಟನಾ ಚಟುವಟಿಕೆಗಳು ಮತ್ತು ಯುವಕರೊಂದಿಗಿನ ಸಂಪರ್ಕದ ನಡುವೆಯೂ, ಕ್ಷೇತ್ರದ ಮೀಸಲಾತಿಗೆ ಅನುಗುಣವಾಗಿ ಯಾರು ಅಭ್ಯರ್ಥಿಯಾಗಲಿದ್ದಾರೆ ಎಂಬುದು ಮುಖ್ಯವಾಗಿದೆ.

ತಮ್ಮ ರಾಜಕೀಯ ಅನುಭವ



ಹಾಗೂ ಪಕ್ಷದ ಸಂಘಟನೆಗೆ ನೀಡಿರುವ ಕೊಡುಗೆಯನ್ನು ಪರಿಗಣಿಸಿ ಅವಕಾಶ ದೊರೆಯಬಹುದೆಂಬ ನಿರೀಕ್ಷೆಯಲ್ಲಿ ಅವರು ಮುಂದುವರಿದಿದ್ದಾರೆ. ಮತ್ತೊಂದೆಡೆ, ಕ್ಷೇತ್ರದಲ್ಲಿ ಬಿಜೆಪಿ ಟಿಕೆಟ್‌ಗಾಗಿ ಆಸಕ್ತಿ ಹೊಂದಿರುವವರ ನಡುವೆ ಅಭ್ಯರ್ಥಿ ಆಯ್ಕೆ ಕುರಿತು ಚರ್ಚೆಗಳು ನಡೆಯುತ್ತಿವೆ.

ಆರೋಗ್ಯ ಕ್ಷೇತರದಲ್ಲೂ ಸೇವೆ

ಮಧ್ಯರಾತ್ರಿಯಲ್ಲೂ ಆರೋಗ್ಯ ಸಮಸ್ಯೆ ಎದುರಿಸುವವರಿಗೆ ನೆರವು, ಬಡ ರೋಗಿಗಳಿಗೆ ಆಂಬುಲೆನ್ಸ್ ವ್ಯವಸ್ಥೆ ಹಾಗೂ ಆರ್ಥಿಕ ಸಂಕಷ್ಟದಲ್ಲಿರುವ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಸಹಾಯ ಮಾಡುವ ಮೂಲಕ ಬಿಸ್ತುವಳ್ಳಿ ಬಾಬು ಅವರು ಕ್ಷೇತ್ರದಲ್ಲಿ ಸಾಮಾಜಿಕ ಸೇವಾ ಕಾರ್ಯಗಳನ್ನು ಮಾಡಿಕೊಂಡು ಬಂದಿದ್ದಾರೆ.

ಕ್ಷೇತ್ರದಲ್ಲಿ ಹಲವು ಆರೋಗ್ಯ ಶಿಬಿರಗಳನ್ನು ಆಯೋಜಿಸುವ ಮೂಲಕ ಬಡ ಮತ್ತು ಅಗತ್ಯವಿರುವ ರೋಗಿಗಳಿಗೆ ಆರೋಗ್ಯ ಸೇವೆ ದೊರೆಯಲು ನೆರವಾಗಿದ್ದಾರೆ. ತುರ್ತು ಸಂದರ್ಭದಲ್ಲಿ ಮಧ್ಯರಾತ್ರಿ ಯಾರೇ ಕರೆ ಮಾಡಿ ಆರೋಗ್ಯ ಸಮಸ್ಯೆ ತಿಳಿಸಿದರೂ, ಅವರಿಗೆ ಆಂಬುಲೆನ್ಸ್ ವ್ಯವಸ್ಥೆ ಕಲ್ಪಿಸಿ ಆಸ್ಪತ್ರೆಗೆ ತಲುಪಿಸುವ ಪ್ರಯತ್ನ ಮಾಡುತ್ತಾರೆ. ಒಂದು ವೇಳೆ ಸಕಾಲದಲ್ಲಿ ಆಂಬುಲೆನ್ಸ್ ಲಭ್ಯವಾಗದಿದ್ದರೆ, ತಮ್ಮ ಸ್ವಂತ ವಾಹನದಲ್ಲಿಯೇ ರೋಗಿಗಳನ್ನು ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸುವ ಕೆಲಸ ಮಾಡುತ್ತಿದ್ದಾರೆ.

ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೂ ನೆರವಿನ ಹಸ್ತ

ಹಿಂದುಳಿದ ಕುಟುಂಬಗಳ ವಿದ್ಯಾರ್ಥಿಗಳ ಶಿಕ್ಷಣಕ್ಕೂ ಬಿಸ್ತುವಳ್ಳಿ ಬಾಬು ನೆರವಾಗುತ್ತಿದ್ದಾರೆ. ಹಣಕಾಸಿನ ತೊಂದರೆಯಿಂದ ಶಾಲಾ–ಕಾಲೇಜುಗಳ ಶಿಕ್ಷಣ ಮುಂದುವರಿಸಲು ಸಂಕಷ್ಟ ಎದುರಿಸುತ್ತಿರುವ ವಿದ್ಯಾರ್ಥಿಗಳಿಗೆ ಅಗತ್ಯ ಆರ್ಥಿಕ ನೆರವು ಒದಗಿಸುವ ಮೂಲಕ ಅವರ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುತ್ತಾ ಬಂದಿದ್ದಾರೆ.

ಶಿಕ್ಷಣದಿಂದ ಯಾವುದೇ ವಿದ್ಯಾರ್ಥಿ ವಂಚಿತರಾಗಬಾರದು ಎಂಬ ಉದ್ದೇಶದಿಂದ ಶಾಲಾ–ಕಾಲೇಜುಗಳ ಶುಲ್ಕ ಸೇರಿದಂತೆ ಅಗತ್ಯ ವೆಚ್ಚಗಳನ್ನು ಭರಿಸಲು ನೆರವು ನೀಡುತ್ತಿರುವುದು ಅವರ ಸಾಮಾಜಿಕ ಕಾರ್ಯಗಳ ಭಾಗವಾಗಿದೆ.

ಆರೋಗ್ಯ ತುರ್ತು ಸಂದರ್ಭಗಳಲ್ಲಿ ಸ್ಪಂದಿಸುವುದು, ಬಡ ಕುಟುಂಬಗಳಿಗೆ ನೆರವಾಗುವುದು ಹಾಗೂ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಸಹಕಾರ ನೀಡುವಂತಹ ಕಾರ್ಯಗಳ ಮೂಲಕ ಬಿಸ್ತುವಳ್ಳಿ ಬಾಬು ಅವರು ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ತಮ್ಮ ಸಾಮಾಜಿಕ ಚಟುವಟಿಕೆಗಳನ್ನು ಮುಂದುವರಿಸಿದ್ದಾರೆ.

ವರಿಷ್ಠರ ನಿರ್ಧಾರಕ್ಕೆ ಕಾಯುತ್ತಿರುವ ಆಕಾಂಕ್ಷಿಗಳು

ಅಣಬೂರು ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಆಯ್ಕೆ ಅಂತಿಮವಾಗಿ ಪಕ್ಷದ ವರಿಷ್ಠರ ನಿರ್ಧಾರಕ್ಕೆ ಒಳಪಟ್ಟಿದೆ. ಟಿಕೆಟ್ ಯಾರಿಗೆ ದೊರೆಯಲಿದೆ ಎಂಬುದು ಇನ್ನೂ ಸ್ಪಷ್ಟವಾಗದ ಹಿನ್ನೆಲೆಯಲ್ಲಿ ಆಕಾಂಕ್ಷಿಗಳು ಪಕ್ಷದ ನಾಯಕರ ಗಮನ ಸೆಳೆಯುವ ಪ್ರಯತ್ನದಲ್ಲಿದ್ದಾರೆ.

ಒಟ್ಟಿನಲ್ಲಿ, ಯುವ ಸಂಘಟನೆ, ರಾಜಕೀಯ ಅನುಭವ ಹಾಗೂ ಗ್ರಾಮೀಣ ಕಾರ್ಯಕ್ರಮಗಳ ಮೂಲಕ ಕ್ಷೇತ್ರದಲ್ಲಿ



ಗುರುತಿಸಿಕೊಂಡಿರುವ ಬಿಸ್ತುವಳ್ಳಿ ಬಾಬು ಅವರು ಬಿಜೆಪಿ ಟಿಕೆಟ್ ನಿರೀಕ್ಷೆಯಲ್ಲಿದ್ದಾರೆ. ಪಕ್ಷವು ಯಾರಿಗೆ ಅವಕಾಶ ನೀಡಲಿದೆ ಎಂಬುದನ್ನು ಕಾದುನೋಡಬೇಕಿದೆ.

ಅಲೆಮಾರಿ ಸಮುದಾಯದ ಬಡಾವಣೆಗೆ ಕುಡಿಯುವ ನೀರಿನ ಸೌಲಭ್ಯ

ಶಾಸಕ ಬಿ. ದೇವೇಂದ್ರಪ್ಪ ಅವರ ಕಾಳಜಿಯಿಂದ ಬಡವರಿಗೆ ನಿವೇಶನ: ಲೋಕ್ಯಾನಾಯ್ಕ

"ಮುಂಜಾನೆಯ ಮೆರಗು"

ಜಗಳೂರು, ಅ.14– ಪಟ್ಟಣದ ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯದ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಕುಡಿಯುವ ನೀರಿನ ನಳಗಳ ವ್ಯವಸ್ಥೆ ಮಾಡಲಾಗಿದೆ ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ತಿಳಿಸಿದರು.

ಪಟ್ಟಣದ ವೈಭವ್ ಹೋಟೆಲ್ ಹಿಂಭಾಗದಲ್ಲಿರುವ ಒಂದು ಎಕರೆ ಹತ್ತು ಗುಂಟೆ ಜಮೀನಿನಲ್ಲಿ ಶಾಸಕ ಬಿ. ದೇವೇಂದ್ರಪ್ಪ ಅವರ ಕಾಳಜಿಯಿಂದ ಬಡ ಕುಟುಂಬಗಳಿಗೆ ಪಟ್ಟಣ ಪಂಚಾಯಿತಿ ಮೂಲಕ ನಿವೇಶನಗಳನ್ನು ಒದಗಿಸಲಾಗಿದೆ. ನಿವೇಶನ ಪಡೆದ ಕುಟುಂಬಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವ ಉದ್ದೇಶದಿಂದ ಇಲಾಖೆಯ ವತಿಯಿಂದ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ನಿವೇಶನಗಳಲ್ಲಿ ವಾಸಿಸಲು ಮುಂದಾಗಿರುವ ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯದ ಕುಟುಂಬಗಳಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಮುಖ್ಯವಾಗಿದೆ. ಈ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ



ಕಲ್ಪಿಸಲಾಗಿದ್ದು, ಜನರು ನೀರಿನ ಸಮಸ್ಯೆ ಎದುರಿಸದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಮನೆ ನಿರ್ಮಿಸಿಕೊಡಲು ಕ್ರಮ ಕೈಗೊಳ್ಳಲಿ: ಕುರಿಜಯ್ಯಣ್ಣ

ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯದ ತಾಲೂಕು ಅಧ್ಯಕ್ಷ ಕುರಿಜಯ್ಯಣ್ಣ ಮಾತನಾಡಿ, ಹಲವು ವರ್ಷಗಳಿಂದ ಸ್ವಂತ ಸೂರಿಲ್ಲದೆ ಜೀವನ ನಡೆಸುತ್ತಿದ್ದ ಸಮುದಾಯದ ಬಡ ಕುಟುಂಬಗಳಿಗೆ ನಿವೇಶನ ನೀಡಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದೆ. ನಿವೇಶನಗಳನ್ನು ಪಡೆದಿರುವ ಕುಟುಂಬಗಳು ಖಾಲಿ ಜಾಗಗಳಲ್ಲಿ ಗುಡಿಸಲುಗಳನ್ನು ಹಾಕಿಕೊಂಡು ವಾಸಿಸುತ್ತಿವೆ. ಆದರೆ, ಕೇವಲ ನಿವೇಶನ ನೀಡಿದರೆ ಸಾಲದು; ಅಲ್ಲಿ ವಾಸಿಸುವ ಕುಟುಂಬಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನೂ ಒದಗಿಸಬೇಕು ಎಂದು ಮನವಿ ಮಾಡಿದರು.

ಬಡ ಕುಟುಂಬಗಳಿಗೆ ಸ್ವಂತ ಮನೆ ನಿರ್ಮಿಸಿಕೊಳ್ಳಲು ಆರ್ಥಿಕ ಸಾಮರ್ಥ್ಯವಿಲ್ಲದ ಕಾರಣ ಅನೇಕರು ಗುಡಿಸಲುಗಳಲ್ಲಿಯೇ ಜೀವನ ಸಾಗಿಸುವ ಪರಿಸ್ಥಿತಿ ಇದೆ. ಆದ್ದರಿಂದ ಅರ್ಹ ಫಲಾನುಭವಿಗಳನ್ನು ಗುರುತಿಸಿ, ಸರ್ಕಾರದ ವಸತಿ ಯೋಜನೆಗಳಡಿ ಮನೆಗಳನ್ನು ನಿರ್ಮಿಸಿಕೊಡಲು ಪಟ್ಟಣ ಪಂಚಾಯಿತಿ ಅಧಿಕಾರಿಗಳು ಮುಂದಾಗಬೇಕು. ಇದರಿಂದ ಸಮುದಾಯದ ಜನರಿಗೆ ಸುರಕ್ಷಿತ ವಸತಿ ಸೌಲಭ್ಯ ದೊರೆಯುವುದರ ಜತೆಗೆ ಗೌರವಯುತ ಜೀವನ ನಡೆಸಲು ಅನುಕೂಲವಾಗಲಿದೆ ಎಂದು ಹೇಳಿದರು.

ನಿವೇಶನ ಪಡೆದಿರುವ ಕುಟುಂಬಗಳಿಗೆ ಕುಡಿಯುವ ನೀರು, ವಿದ್ಯುತ್, ರಸ್ತೆ ಹಾಗೂ ಇತರ ಅಗತ್ಯ ಸೌಲಭ್ಯಗಳನ್ನು ಹಂತ ಹಂತವಾಗಿ ಕಲ್ಪಿಸುವ ಮೂಲಕ ಬಡಾವಣೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಬೇಕು. ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ವಿಶೇಷ ಗಮನಹರಿಸಿ, ಸಮುದಾಯದ ಬಹುದಿನಗಳ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪೌರಕಾರ್ಮಿಕರ ಸಂಘದ ತಾಲೂಕು ಅಧ್ಯಕ್ಷ ಚಿನ್ನಪ್ಪ, ಪಟ್ಟಣ ಪಂಚಾಯಿತಿ ಸಿಬ್ಬಂದಿ ನೂರುಲ್ಲಾ, ಸೇರಿದಂತೆ ಇತರರು ಉಪಸ್ಥಿತರಿದ್ದರು.

ಜಗಳೂರು ಜಿ.ಪಂ., ತಾ.ಪಂ. ಕ್ಷೇತ್ರಗಳಲ್ಲಿ

ಒಬಿಸಿಗೆ ಪ್ರಾತಿನಿಧ್ಯ ನೀಡಿ: ಸಾಗರ್ ಅಂಜಿನಪ್ಪ

"ಮುಂಜಾನೆಯ ಮೆರಗು"

ಜಗಳೂರು, ಅ.14– ಜಗಳೂರು ತಾಲ್ಲೂಕಿನ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಕ್ಷೇತ್ರಗಳ ಮೀಸಲಾತಿ ಹಂಚಿಕೆಯಲ್ಲಿ ಹಿಂದುಳಿದ ವರ್ಗಗಳಿಗೆ ಸಾಮಾಜಿಕ ನ್ಯಾಯ ದೊರೆತಿಲ್ಲ. ಆದ್ದರಿಂದ ದೊಣೆಹಳ್ಳಿ ಮತ್ತು ಸೊಕ್ಕೆ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಲ್ಲಿ ಒಂದರಲ್ಲಿ ಹಾಗೂ ತಾಲೂಕು ಪಂಚಾಯಿತಿಯ ನಾಲ್ಕು ಕ್ಷೇತ್ರಗಳಲ್ಲಿ ಹಿಂದುಳಿದ ವರ್ಗದವರಿಗೆ ಬಿಜೆಪಿ ಟಿಕೆಟ್ ನೀಡಬೇಕು ಎಂದು ಬಿಜೆಪಿ ಒಬಿಸಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಿಕ್ಕ ಉಜ್ಜಯಿನಿ ಸಾಗರ್ ಅಂಜಿನಪ್ಪ ಒತ್ತಾಯಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಗಳೂರು ತಾಲ್ಲೂಕಿನ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಕ್ಷೇತ್ರಗಳಿಗೆ ಪ್ರಕಟಿಸಿರುವ ಮೀಸಲಾತಿಯಲ್ಲಿ ಹಿಂದುಳಿದ ವರ್ಗಗಳಿಗೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ತಾಲ್ಲೂಕಿನ ನಾಲ್ಕು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಲ್ಲಿ ಎರಡು ಸಾಮಾನ್ಯ, ಒಂದು ಪರಿಶಿಷ್ಟ ಜಾತಿ ಮಹಿಳೆ ಹಾಗೂ ಒಂದು ಪರಿಶಿಷ್ಟ ಪಂಗಡ ಮಹಿಳೆಗೆ ಮೀಸಲಾತಿ ನೀಡಲಾಗಿದೆ. ಅದೇ ರೀತಿ 16 ತಾಲೂಕು ಪಂಚಾಯಿತಿ ಕ್ಷೇತ್ರಗಳಲ್ಲಿ ನಾಲ್ಕು ಪರಿಶಿಷ್ಟ ಜಾತಿ, ನಾಲ್ಕು ಪರಿಶಿಷ್ಟ ಪಂಗಡ ಹಾಗೂ ಎಂಟು ಸಾಮಾನ್ಯ ಕ್ಷೇತ್ರಗಳೆಂದು ಮೀಸಲಾತಿ ಪ್ರಕಟಿಸಲಾಗಿದೆ. ಆದರೆ, ಹಿಂದುಳಿದ ವರ್ಗಗಳಿಗೆ ಪ್ರತ್ಯೇಕ ಮೀಸಲಾತಿ ಕಲ್ಪಿಸದಿರುವುದು ಅನ್ಯಾಯವಾಗಿದೆ ಎಂದು ದೂರಿದರು.

ಜಗಳೂರು ತಾಲ್ಲೂಕಿನಲ್ಲಿ ಹಿಂದುಳಿದ